ಸಂಪುಟ : 11 ಸಂಚಿಕೆ: 17 ಪುಟ : 4+2 ಬೆಲೆ: 3.00 ಶುಕ್ರವಾರ ಫೆಬ್ರವರಿ 13 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 17 Pages : 4+2 Price : 3.00 Friday February 13 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ರಾಹುಲ್ ಗಾಂಧಿ ವಿರುದ್ಧ ಬಿಜೆಪಿಯಿಂದ ನಿಲುವಳಿ ಸೂಚನೆ ಸಲ್ಲಿಕೆ; ಸಂಸತ್ ಸದಸ್ಯತ್ವ ರದ್ದುಗೊಳಿಸುವಂತೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭೆ ಅಧಿವೇಶನದಲ್ಲಿ ಗುರುವಾರ (ಫೆ.12) ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ನಿಲುವಳಿ ಸೂಚನೆ ಸಲ್ಲಿಸಿದ್ದು, ಅವರ ಸಂಸತ್ತಿನ ಸದಸ್ಯತ್ವ ರದ್ದುಗೊಳಿಸುವಂತೆ ಕೋರಿದೆ.

ಈ ಕುರಿತು ಪ್ರತಿಕ್ರಿಯಿಸಿದ ಬಿಜೆಪಿ ಸಂಸದ ನಿಶಿಕಾಂತ್ ದುಬೆ, ಇದು ವಿಶೇಷ ಹಕ್ಕುಚ್ಯುತಿ ನೋಟಿಸ್ ಅಲ್ಲ. ನಾನು ಒಂದು ಪ್ರಮುಖ ಪ್ರಸ್ತಾವನೆಯನ್ನು ಸಲ್ಲಿಸಿದ್ದೇನೆ ಎಂದಿದ್ದಾರೆ. ರಾಹುಲ್ ಗಾಂಧಿ ದೇಶದ ಜನರನ್ನು ದಾರಿತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿರುವ ದುಬೆ, ಅವರ ಲೋಕಸಭಾ ಸದಸ್ಯತ್ವವನ್ನು ರದ್ದುಗೊಳಿಸಬೇಕು ಮತ್ತು ಚುನಾವಣೆಗೆ ಸ್ಪರ್ಧಿಸದಂತೆ ಅವರಿಗೆ ಜೀವಿತಾವಧಿ ನಿಷೇಧ ಹೇರಬೇಕು ಎಂದು ಒತ್ತಾಯಿಸಿದ್ದಾರೆ.

ರಾಹುಲ್ ಗಾಂಧಿ ಅವರು ಜಾರ್ಜ್ ಸೊರೊಸ್ ಫೌಂಡೇಶನ್, ಫೋರ್ಡ್ ಫೌಂಡೇಶನ್ ಮತ್ತು ಯುಎಸ್ಐಡಿ ನಂತಹ ವಿದೇಶಿ ಸಂಸ್ಥೆಗಳೊಂದಿಗೆ ಸಂಪರ್ಕ ಹೊಂದಿದ್ದು, ಭಾರತ ವಿರೋಧಿ ಶಕ್ತಿಗಳೊಂದಿಗೆ ಕೈಜೋಡಿಸುತ್ತಿದ್ದಾರೆ ಎಂದು ದುಬೆ ಆರೋಪಿಸಿದ್ದಾರೆ.

ಲೋಕಸಭೆಯಲ್ಲಿ ಭಾರತ–ಅಮೆರಿಕ ವ್ಯಾಪಾರ ಒಪ್ಪಂದ ಮತ್ತು ಕೇಂದ್ರ ಬಜೆಟ್ ಬಗ್ಗೆ ಮಾಡಿದ ಭಾಷಣದಲ್ಲಿ ರಾಹುಲ್ ಗಾಂಧಿ, ಸರ್ಕಾರ ರಾಷ್ಟ್ರೀಯ ಹಿತಾಸಕ್ತಿಗಳನ್ನು ಬಿಟ್ಟುಕೊಟ್ಟಿದೆ ಎಂದು ಆರೋಪಿಸಿದ್ದರು. ಈ ಭಾಷಣದ ಬೆನ್ನಲ್ಲೇ ನಿಲುವಳಿ ಸೂಚನೆ ಮಂಡನೆಯಾಗಿದೆ.

ಇದು ಸಾಮಾನ್ಯ ಹಕ್ಕುಚ್ಯುತಿ ನಿರ್ಣಯಕ್ಕಿಂತ ಗಂಭೀರವಾದದ್ದು ಎಂದು ದುಬೆ ಹೇಳಿದ್ದಾರೆ.

### ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ರಾಜ್ಯ ಸರಕಾರಕ್ಕೆ ಹಣಕಾಸಿನ ಕೊರತೆಯಿಲ್ಲ

■ವಿಜಯಸಾಕ್ಷಿ ಸುದ್ದಿ, ರೋಣ

ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಗೆ ಪೈಲಟ್ ಯೋಜನೆಯಡಿಯಲ್ಲಿ ಮುಗುಳಿ ಗ್ರಾಮ ಸೇರಿದಂತೆ ತಾಲೂಕಿನಲ್ಲಿ ಐದು ಗ್ರಾಮಗಳನ್ನು ಆಯ್ಕೆ ಮಾಡಿಕೊಂಡಿದ್ದು, ಈ ಯೋಜನೆಗೆ ಶಾಸಕರ ಅನುದಾನವನ್ನು ಒದಗಿಸಲಾಗುವುದು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಗುರುವಾರ ತಾಲೂಕಿನ ಮುಗುಳಿ ಗ್ರಾಮದಲ್ಲಿ 10 ಲಕ್ಷ ರೂ ವೆಚ್ಚದ ದುರ್ಗಾದೇವಿ ಸಮುದಾಯ ಭವನ, ಕಾಳಿಕಾದೇವಿ ಸಮುದಾಯ ಭವನದ ಭೂಮಿಪೂಜೆ, ಬೀರೇಶ್ವರ ಸಮುದಾಯ ಭವನದ ಉದ್ಘಾಟನೆ ಹಾಗೂ ದ್ಯಾಮುಣಸಿ ಗ್ರಾಮದಲ್ಲಿ ಸಿ.ಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆಯನ್ನು ನೆರವೇರಿಸಿ ಮಾತನಾಡಿದರು.



ಮುಗುಳಿ ಗ್ರಾಮದ ಗಂಗಮ್ಮ ಬೆಟಗೇರಿ ಎಂಬ ವೃದ್ಧೆ ಒಂಟಿಯಾಗಿ ವಾಸ ಮಾಡುತ್ತಿರುವ ವಿಷಯ ಮಾಧ್ಯಮದವರ ಗಮನಕ್ಕೆ ಬರುತ್ತಿದ್ದಂತೆ ಈ ವಿಷಯವನ್ನು ತಾ.ಪಂ ಇಒ ಚಂದ್ರಶೇಖರ ಕಂದಕೂರ ಅವರೊಂದಿಗೆ ಹಂಚಿಕೊಂಡರು. ಆಗ ಚಂದ್ರಶೇಖರ ಕಂದಕೂರ ಅವರು ಪಿಡಿಒ ಜೊತೆಗೆ ವೃದ್ಧೆಯ ಮನೆಗೆ ತೆರಳಿ ಆರೋಗ್ಯವನ್ನು ವಿಚಾರಿಸಿದರು. ನಂತರ ವೃದ್ಧೆಗೆ ಹಣಕಾಸಿನ ನೆರವು ನೀಡಿ ವೃದ್ಧೆಯ ಸಂಬಂಧಿಗಳಿದ್ದರೆ ವಿಚಾರಿಸಿ ಮಾಹಿತಿ ನೀಡಿ. ಇಲ್ಲದಿದ್ದರೆ ಹಿರಿಯ ಅಧಿಕಾರಿಗಳ ಹಾಗೂ ಶಾಸಕರ ಸಲಹೆ ಪಡೆದು ವೃದ್ಧೆಗೆ ಆಸರೆ ಒದಗಿಸೋಣ ಎಂದು ಇಲಾಖೆಯ ಸಿಬ್ಬಂದಿಗಳಿಗೆ ಸೂಚಿಸಿದರು.

ಗ್ರಾಮಸ್ಥರ ಇಚ್ಛೆಯಂತೆ 1 ಕೋಟಿ 60 ಲಕ್ಷ ರೂ.ಗಳ ವೆಚ್ಚದಲ್ಲಿ ಪ್ರೌಢಶಾಲೆಯನ್ನು ನಿರ್ಮಿಸಿ ಈಗಾಗಲೇ ಉದ್ಘಾಟಿಸಲಾಗಿದೆ. 50 ಲಕ್ಷ ರೂಗಳ ವೆಚ್ಚದಲ್ಲಿ ಸಿ.ಸಿ ರಸ್ತೆ ನಿರ್ಮಿಸಲಾಗಿದೆ. ಪ್ರೌಢಶಾಲೆಗೆ ಕುಡಿಯುವ ನೀರು ಪೂರೈಕೆಗೆ 5 ಲಕ್ಷ ರೂಗಳನ್ನು ಒದಗಿಸಲಾಗಿದ್ದು, ಪ್ರಾಥಮಿಕ ಶಾಲೆಯ ನೂತನ ಕೊಠಡಿಗಳಿಗೆ ಶೀಘ್ರವೇ ಭೂಮಿಪೂಜೆ ನೆರವೇರಿಸಲಾಗುವುದು. ಮುಂದಿನ ಹಂತದಲ್ಲಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಎಲ್ಲ ರಸ್ತೆಗಳನ್ನು ಸುಧಾರಿಸಲಾಗುವುದು ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಕೊಟ್ಟ ಮಾತಿನಂತೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಮುಖ್ಯವಾಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ಜಿಲ್ಲೆ ರಾಜ್ಯದಲ್ಲಿಯೇ ಪ್ರಥಮ ಸ್ಥಾನವನ್ನು ಪಡೆದುಕೊಂಡಿರುವುದು ಹೆಮ್ಮೆಯ ಸಂಗತಿ. ಕಾರಣ ಇಂದು ಗ್ಯಾರಂಟಿ ಯೋಜನೆಗಳ ಲಾಭದಿಂದ ಬಡ ಕುಟುಂಬಗಳು ಆರ್ಥಿಕ ಸಬಲತೆಯನ್ನು ಕಾಣುತ್ತಿವೆ.

ಮಕ್ಕಳಿಗೆ ಉತ್ತಮ ಶಿಕ್ಷಣ ಸಿಗುತ್ತಿದೆ. ಬಡವರಿಗೆ ಅನುಕೂಲವಾಗುವ ಮಹತ್ವದ ಯೋಜನೆಗಳನ್ನು ಬಿಜೆಪಿಯವರು ವಿರೋಧಿಸುತ್ತಿರುವುದು ನ್ಯಾಯವೇ ಎಂದು ಪ್ರಶ್ನಿಸಿದರು.

ಗ್ಯಾರಂಟಿ ಯೋಜನೆಗಳಿಗೆ ರಾಜ್ಯ ಸರಕಾರ 53 ಸಾವಿರ ಕೋಟಿರೂಗಳನ್ನು ಫಲಾನುಭವಿಗಳಿಗೆ ನೀಡುತ್ತಿದೆ. ಇದರಿಂದ ರಾಜ್ಯದಲ್ಲಿ 1 ಕೋಟಿ 20 ಲಕ್ಷ ಕುಟುಂಬಗಳು ಆರ್ಥಿಕ ಪ್ರಗತಿಯನ್ನು ಸಾಧಿಸಿವೆ. ಇನ್ನು ಸಾಮಾಜಿಕ ಭದ್ರತಾ ಯೋಜನೆಗಳಾದ ವಿಧವಾ ವೇತನ, ವಿಕಲಚೇತನ ವೇತನ, ವೃದ್ಧಾಪ್ಯ ವೇತನ ಸೇರಿ ಅನೇಕ ಯೋಜನೆಗಳಿಗೆ ಸರಕಾರ 1 ಲಕ್ಷ 17 ಸಾವಿರ ಕೋಟಿ ರೂಗಳನ್ನು ಒದಗಿಸುತ್ತಿದೆ. ಸರಕಾರಕ್ಕೆ ಹಣಕಾಸಿನ ಕೊರತೆಯಿಲ್ಲ ಎನ್ನುವುದಕ್ಕೆ ನಮ್ಮ ಅಭಿವೃದ್ಧಿ ಕಾರ್ಯಗಳೇ ಸಾಕ್ಷಿಯಾಗಿವೆ ಎಂದರು.

ದ್ಯಾಮುಣಸಿ ಗ್ರಾಮಕ್ಕೂ ಸಹ ಈ ಹಿಂದೆ ಸಾಕಷ್ಟು ಅನುದಾನವನ್ನು ಒದಗಿಸಲಾಗಿದೆ. ಈಗ ಮತ್ತೆ 25 ಲಕ್ಷ ರೂಗಳ ಅನುದಾನದಲ್ಲಿ ಸಿಸಿ ರಸ್ತೆಯನ್ನು ನಿರ್ಮಿಸಲಾಗುತ್ತಿದೆ.

ಗ್ರಾಮಸ್ಥರ ಬೇಡಿಕೆಗಳನ್ನು ಹಂತಹಂತವಾಗಿ ಈಡೇರಿಸುತ್ತಾ ಬಂದಿದ್ದು, ಉಳಿದ ಬೇಡಿಕೆಗಳಿಗೆ ಮುಂದಿನ ಹಂತದಲ್ಲಿ ಅನುದಾನವನ್ನು ಒದಗಿಸುವ ಜೊತೆಗೆ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದರು.

ಬ್ಲಾಕ್ ಕಾಂಗ್ರೆಸ್ ಕಮಿಟಿ ಅಧ್ಯಕ್ಷ ವೀರಣ್ಣ ಶೆಟ್ಟರ, ಎಪಿಎಂಸಿ ಮಾಜಿ ಅಧ್ಯಕ್ಷ ಪರಶುರಾಮ ಅಳಗವಾಡಿ, ತಾ.ಪಂ ಮಾಜಿ ಸದಸ್ಯ ಶಿದ್ಲಿಂಗಪ್ಪ ಯಾಳಗಿ, ಎಪಿಎಂಸಿ ಮಾಜಿ ಸದಸ್ಯ ನಾಗರಾಜ, ಗ್ರಾ.ಪಂ ಮಾಜಿ ಅಧ್ಯಕ್ಷ ವೀರಣ್ಣ ಯಾಳಗಿ, ಮುಖಂಡರಾದ ಅಭಿಷೇಕ ನವಲಗುಂದ, ವಿಜಯ ತೊಟರ, ದೇಸಾಯಿ, ಸೋಮು ನಾಗರಾಜ, ಫಕ್ಕೀರಪ್ಪ ಮುಗುಳಿ, ಮಲ್ಲಪ್ಪ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಜಿಲ್ಲೆಯ ಅಭಿವೃದ್ಧಿ, ಗೌರವ ಹೆಚ್ಚಿಸಲು ಕೂಡಿ ಕೆಲಸ ಮಾಡೋಣ; ನೂತನ ಜಿಲ್ಲಾಧಿಕಾರಿ ಸ್ನೇಹಲ್ ಆರ್

# ನಿಯಮಾನುಸಾರ ನಿಮ್ಮ ಕರ್ತವ್ಯ ನಿರ್ವಹಿಸಿ




ಯಾವುದೇ ಅಧಿಕಾರಿ, ಸಿಬ್ಬಂದಿಗಳಿಗೆ ತಮ್ಮ ವೃತ್ತಿ ನಿರ್ವಹಿಸುವಲ್ಲಿ ಉಂಟಾಗುವ ಅನಾನುಕೂಲತೆ, ಸಮಸ್ಯೆಗಳು ಇದ್ದಲ್ಲಿ, ಅಥವಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಸಲಹೆ–ಸೂಚನೆಗಳಿದ್ದಲ್ಲಿ ನನ್ನೊಂದಿಗೆ ಹಂಚಿಕೊಳ್ಳಲು ಜಿಲ್ಲಾಧಿಕಾರಿಗಳ ಕಚೇರಿ ಮುಕ್ತವಾಗಿದೆ. ಎಲ್ಲರೂ ತಮ್ಮ ಜವಾಬ್ದಾರಿ ಹಾಗೂ ಹೊಣೆಗಾರಿಕೆಗಳನ್ನು ಅರಿತು ನಿಯಮಾನುಸಾರ ಕರ್ತವ್ಯ ನಿರ್ವಹಿಸಬೇಕೆಂದು ನೂತನ ಜಿಲ್ಲಾಧಿಕಾರಿ ಸ್ನೇಹಲ್ ಆರ್ ಸೂಚಿಸಿದರು.

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯದಲ್ಲಿ ಧಾರವಾಡ ಜಿಲ್ಲೆಗೆ ವಿಶೇಷವಾದ ಸ್ಥಾನ ಹಾಗೂ ಗುರುತಿಸುವಿಕೆ ಇದೆ. ಇಲ್ಲಿನ ಸಾಹಿತ್ಯ, ಸಂಗೀತ, ಶಿಕ್ಷಣ ಮತ್ತು ಚಿತ್ರಕಲೆಗಳು ರಾಷ್ಟ್ರೀಯ ಮಟ್ಟದಲ್ಲಿ ಸ್ಥಾನ ಗಳಿಸಿವೆ. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಮತ್ತು ಎಲ್ಲ ಕ್ಷೇತ್ರಗಳಲ್ಲಿ ಉತ್ತಮ ಸಾಧನೆಯ ಮೂಲಕ ಜಿಲ್ಲೆಯ ಗೌರವ ಹೆಚ್ಚಿಸಲು ಎಲ್ಲ ಸರ್ಕಾರಿ ನೌಕರರು ಕೂಡಿ ಕೆಲಸ ಮಾಡೋಣ. ಆಡಳಿತದಲ್ಲಿ ಪಾರದರ್ಶಕತೆ ಹಾಗೂ ಸಮಯಪಾಲನೆಗೆ ಆದ್ಯತೆ ನೀಡಬೇಕು ಎಂದು ಧಾರವಾಡ ಜಿಲ್ಲೆಯ ನೂತನ ಜಿಲ್ಲಾಧಿಕಾರಿ ಸ್ನೇಹಲ್ ಆರ್ ಅವರು ಹೇಳಿದರು.

ಅವರು ಗುರುವಾರ ಮಧ್ಯಾಹ್ನ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳ ಪರಿಚಯಾತ್ಮಕ ಸಭೆ ಜರುಗಿಸಿ, ಇಲಾಖೆಗಳ ಮಾಹಿತಿ ಪಡೆದು, ಮಾತನಾಡಿದರು. ಸರ್ಕಾರಿ ಕರ್ತವ್ಯ ನಿರ್ವಹಿಸುವಲ್ಲಿ ನಮ್ಮ ವಯಕ್ತಿಕ ಕಾರಣಗಳಿಂದ ಸಾರ್ವಜನಿಕರಿಗೆ ತೊಂದರೆಯಾಗಬಾರದು. ನಾಗರಿಕರ ಬೇಡಿಕೆ, ಸಮಸ್ಯೆಗಳ ಕುರಿತು ಕ್ಷೇತ್ರ ಮಟ್ಟದಲ್ಲಿ, ತಾಲೂಕಾಮಟ್ಟದಲ್ಲಿ ಆಲಿಸಿ, ತಮ್ಮ ಹಂತದಲ್ಲಿ ಸಾಧ್ಯವಾದರೆ ಅಲ್ಲಿಯೇ ಸಮಸ್ಯೆಗಳಿಗೆ ಪರಿಹಾರ ಸೂಚಿಸಬೇಕು. ಯಾವುದೇ ವ್ಯಕ್ತಿಗಳನ್ನು ಅನಗತ್ಯವಾಗಿ ಕಚೇರಿಗಳಿಗೆ ಅಲೆದಾಡಿಸಬಾರದು. ಸರ್ಕಾರವು ಅನೇಕ ಇಲಾಖೆಗಳ ಯೋಜನೆ ಮತ್ತು ಕಾರ್ಯಕ್ರಮಗಳನ್ನು ಜನರ ಮನೆಬಾಗಲಿಗೆ ತಲುಪಿಸುವ ವ್ಯವಸ್ಥೆ ಮಾಡಿದೆ ಎಂದು ಹೇಳಿದರು.

ವೇದಿಕೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಶೇಖ ಅಬ್ದುಲ್ ಅಲಿಂ ಸಿದ್ದಕಿ, ಪ್ರೋಬೆಷನರಿ ಐಎಎಸ್ ಅಧಿಕಾರಿ ರಿತಿಕಾ ವರ್ಮಾ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಇದ್ದರು. ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಕೆ.ಸಿ. ಭದ್ರಣ್ಣವರ, ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕ ಶ್ರೀಪಾದ ಕುಲಕರ್ಣಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಬಾನುಮತಿ ಎಚ್, ಪಂಚಾಯತ್ ರಾಜ್ ಮತ್ತು ಇಂಜಿನಿಯರಿಂಗ್ ಇಲಾಖೆಯ ಕಾರ್ಯಪಾಲಕ ಅಭಿಯಂತರ ಆರ್. ಎಮ್. ಸೊಪ್ಪಿಮಠ, ಪಶು ಪಾಲನೆ ಮತ್ತು ಪಶು ಸಂಗೋಪನೆ ಇಲಾಖೆಯ ಉಪನಿರ್ದೇಶಕ ಡಾ. ಎಸ್.ವಿ. ಸಂತಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಮ್. ಹೊನಕೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ವಿಜಯಲಕ್ಷ್ಮೀ ಪಾಟೀಲ, ಅಲ್ಪ ಸಂಖ್ಯಾತ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪೂರ್ಣಿಮಾ ಚೂರಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

### ಭೂ ಗ್ಯಾರಂಟಿ ಸಮಾವೇಶಕ್ಕೆ ಶಿರಹಟ್ಟಿ ತಾಲೂಕಾಡಳಿತದ ವತಿಯಿಂದ 35 ಬಸ್

# ಸಮಾವೇಶಕ್ಕೆ ತೆರಳಲು ಸಕಲ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಫೆ. 14ರಂದು ಹಾವೇರಿಯಲ್ಲಿ ಜರುಗಲಿರುವ ರಾಜ್ಯ ಸರಕಾರದ ಭೂ ಗ್ಯಾರಂಟಿ ಸಮಾವೇಶಕ್ಕೆ ಶಿರಹಟ್ಟಿ ತಾಲೂಕಾಡಳಿತದ ವತಿಯಿಂದ ಹಕ್ಕುಪತ್ರ ಮತ್ತು ಪೋತಿ ಖಾತೆಯ ಅರ್ಹ ಫಲಾನುಭವಿಗಳನ್ನು ಸಮಾವೇಶಕ್ಕೆ ಕರೆದೊಯ್ಯಲು 35 ಬಸ್ ವ್ಯವಸ್ಥೆಯನ್ನು ಮಾಡಿಕೊಳ್ಳಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ತಹಸೀಲ್ದಾರ ಕೆ. ರಾಘವೇಂದ್ರ ರಾವು, ಸರಕಾರದ ವತಿಯಿಂದ ಹಕ್ಕುಪತ್ರ ಪಡೆಯುವ ಎಲ್ಲ ಫಲಾನುಭವಿಗಳನ್ನು ಹಾವೇರಿಯಲ್ಲಿ ಫೆ. 14ರಂದು ಜರುಗಲಿರುವ ಭೂ ಗ್ಯಾರಂಟಿ ಸಮಾವೇಶಕ್ಕೆ ಕರೆದೊಯ್ಯಲು ತಾಲೂಕಾಡಳಿತದ ವತಿಯಿಂದ ಸಕಲ ಸಿದ್ಧತೆಯನ್ನು ಮಾಡಿಕೊಳ್ಳಲಾಗುತ್ತಿದ್ದು, ಫಲಾನುಭವಿಗಳು ಯಾವುದೇ ಆತಂಕಕ್ಕೆ ಒಳಗಾಗಬಾರದು. ಸುರಕ್ಷತೆಯಿಂದ ಕರೆದುಕೊಂಡು ಹೋಗಿ ಪುನಃ ನಿಮ್ಮ ಗ್ರಾಮಕ್ಕೆ ನಿಮ್ಮನ್ನು ತಲುಪಿಸುವ ವ್ಯವಸ್ಥೆ ಮಾಡಲಾಗಿದೆ. ಆದ್ದರಿಂದ ಎಲ್ಲ ಅರ್ಹ ಫಲಾನುಭವಿಗಳು ಸಮಾವೇಶಕ್ಕೆ ಆಗಮಿಸಿ ಸರಕಾರದ ಅಧಿಕೃತ ದಾಖಲೆಗಳನ್ನು ಪಡೆಯಬೇಕೆಂದು ಹೇಳಿದರು.

ಶಿರಹಟ್ಟಿ ತಾಲೂಕಿನಲ್ಲಿ ಈಗಾಗಲೇ ಗುರುತಿಸಲಾಗಿದ್ದ ಸೇವಾನಗರ, ಶಿವಾಜಿನಗರ, ಹೊಸಳ್ಳಿ ಮತ್ತು ಗುಡ್ಡದಪುರ ಗ್ರಾಮಗಳಲ್ಲಿ ಹಲವು ವರ್ಷಗಳಿಂದ ವಾಸವಾಗಿದ್ದ 182ಕ್ಕೂ ಅಧಿಕ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲು ಈಗಾಗಲೇ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಇನ್ನೂ ಕೆಲವು ನೋಂದಣಿ ಹಂತದಲ್ಲಿದ್ದು, ಈ ಸಂಖ್ಯೆ ಇನ್ನೂ ಹೆಚ್ಚಾಗುವ ನಿರೀಕ್ಷೆ ಇದೆ. ಗ್ರಾಮೀಣಾಭಿವೃದ್ಧಿ ಇಲಾಖೆಯ ಇ–ಸ್ವತ್ತು ಮತ್ತು ನೋಂದಣಿ ಇಲಾಖೆಯ ಮೂರು ತಂತ್ರಾಂಶಗಳ ಮೂಲಕ ಸರ್ಕಾರವೇ ಅವರ ಹೆಸರಿಗೆ ಕ್ರಯಪತ್ರದ ಮೂಲಕ ನೋಂದಣಿ ಮಾಡಿಸಿ ಖಾತೆ ಮಾಡಿಸಿಕೊಡುತ್ತಿರುವುದು ವಿಶೇಷವಾಗಿದೆ.

ಅಧಿಕೃತ ದಾಖಲೆ ಇರುವುದರಿಂದ ಬ್ಯಾಂಕ್ ಸಾಲ ಪಡೆಯಲು ಸುಲಭ, ಕಂದಾಯ ಗ್ರಾಮವಾದ ನಂತರ ರಸ್ತೆ, ಚರಂಡಿ ಕುಡಿಯುವ ನೀರು ಮತ್ತು ಬೀದಿ ದೀಪದಂತಹ ಸೌಲಭ್ಯಗಳ್ಳು ಒದಗಿಸಲು ಕಾನೂನುಬದ್ಧ ಅವಕಾಶ, ವಿವಿಧ ವಸತಿ ಯೋಜನೆಗಳು ಅಥವಾ ಶೌಚಾಲಯ ನಿರ್ಮಾಣದ ಸೌಲಭ್ಯಪಡೆಯಲು ಅವಕಾಶ, ಭವಿಷ್ಯದಲ್ಲಿ ಆಸ್ತಿಯನ್ನು ಮಕ್ಕಳಿಗೆ ವರ್ಗಾಯಿಸಲು ಅವಕಾಶ, ಹಾಗೂ ಅಧಿಕೃತ ವಿಳಾಸ ಈ ಹಕ್ಕುಪತ್ರದಿಂದ ಸಿಗಲಿದೆ.

ಶಿರಹಟ್ಟಿ ▸▸3ನೇ ಪುಟಕ್ಕೆ

## ಮಹಾಶಿವರಾತ್ರಿ ಮಹೋತ್ಸವ: ನಾಗೇಶ್ವರ ಜ್ಯೋತಿರ್ಲಿಂಗ ದರ್ಶನಕ್ಕೆ ಭವ್ಯ ಸಿದ್ಧತೆ




"ಫೆಬ್ರವರಿ 14 ರಂದು ನಗರದ ಪ್ರಮುಖ ಬೀದಿಗಳಲ್ಲಿ ವಿಶೇಷ ಜ್ಯೋತಿರ್ಲಿಂಗ ರಥ ಹಾಗೂ 2026 ರ ಅಂಗವಾಗಿ 26 ಕಾರುಗಳಲ್ಲಿ ಜ್ಯೋತಿರ್ಲಿಂಗ ಮೆರವಣಿಗೆ ನಡೆಯಲಿದೆ. ನೂರಾರು ಸೋದರ–ಸೋದರಿಯರು ಭಾಗವಹಿಸಲಿದ್ದಾರೆ."

– **ರಾಜಯೋಗಿನಿ ಬಿ.ಕೆ. ಜಯಂತಿ ಅಕ್ಕನವರು,** ಈಶ್ವರೀಯ ವಿಶ್ವವಿದ್ಯಾಲಯ

**ಫೆಬ್ರವರಿ 16:** ಗೌರವಾರ್ಪಣಾ ಮಹೋತ್ಸವ ಹಾಗೂ ಕಾಯಕ ಯೋಗಿಗಳಿಗೆ ಸನ್ಮಾನ ಕಾರ್ಯಕ್ರಮ ನಡೆಯಲಿದ್ದು, ವಿವಿಧ ಇಲಾಖೆಗಳ ತಲಾ ಇಬ್ಬರಿಗೆ ಸನ್ಮಾನಿಸಲಾಗುತ್ತದೆ. ಡಾ. ದುರಗೇಶ್ ಕೆ.ಆರ್., ರಾಜೇಶ್ ಕಲ್ಯಾಣ್ ಶೆಟ್ಟರ್, ಆರ್.ಎಸ್. ಬುರಡಿ, ಕೈಲಾಸ ಮೂರ್ತಿ, ಡಾ. ಬಸವರಾಜ ಬಳ್ಳಾರಿ, ನಾಗಭೂಷಣ್ ಕೆ.ಎಂ ಸೇರಿದಂತೆ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

**ಫೆಬ್ರುವರಿ 17:** ಸಾಂಸ್ಕೃತಿಕ ಮಹೋತ್ಸವವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಉದ್ಘಾಟಿಸಲಿದ್ದಾರೆ. ಸಂಜೆ 6 ಗಂಟೆಗೆ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸಂಗೀತ ಮತ್ತು ನೃತ್ಯ ಪ್ರದರ್ಶನಗಳು ಅದ್ದೂರಿಯಾಗಿ ಜರುಗಲಿವೆ. ಚೈತನ್ಯ ಡ್ಯಾನ್ಸ್ ಅಕಾಡಮಿ, ನೃತ್ಯ ಸಿರಿ ಡ್ಯಾನ್ಸ್ ಅಖಾಡಮಿ ಸೇರಿದಂತೆ ಹಲವಾರು ಕಲಾ ತಂಡಗಳು ಭಾಗವಹಿಸಲಿವೆ.

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಫೆಬ್ರವರಿ 15 ರಿಂದ 17, 2026 ರವರೆಗೆ ಮಹಾಶಿವರಾತ್ರಿ ಮಹೋತ್ಸವವು ಅದ್ದೂರಿಯಾಗಿ ನಡೆಯಲಿದೆ. ಈ ಸಂದರ್ಭದಲ್ಲಿ ಅತ್ಯಾಕರ್ಷಕ ನಾಗೇಶ್ವರ ಜ್ಯೋತಿರ್ಲಿಂಗ ದರ್ಶನ ಹಾಗೂ ವಿವಿಧ ಆಕರ್ಷಕ ಸ್ಟಾಲ್‌ಗಳನ್ನು ನಿರ್ಮಿಸಲಾಗಿದೆ. ಪ್ರತಿದಿನ ಸಂಜೆ 5.00 ರಿಂದ ರಾತ್ರಿ 10.00 ಗಂಟೆಯವರೆಗೆ ಸಾರ್ವಜನಿಕರು ಆಗಮಿಸಿ ದರ್ಶನ ಪಡೆದು ಧನ್ಯರಾಗಬೇಕು ಎಂದು ಈಶ್ವರೀಯ ವಿಶ್ವವಿದ್ಯಾಲಯದ ರಾಜಯೋಗಿನಿ ಬಿ.ಕೆ. ಜಯಂತಿ ಅಕ್ಕನವರು ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾರ್ಯಕ್ರಮವನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ ಉದ್ಘಾಟಿಸಲಿದ್ದು, ಜ್ಯೋತಿರ್ಲಿಂಗದ ಮುಂದೆ ದೀಪಾರಾಧನೆಯನ್ನು ವಿ.ಪ ಸದಸ್ಯ ಎಸ್.ವಿ. ಸಂಕನೂರ ನೆರವೇರಿಸಲಿದ್ದಾರೆ ಎಂದರು. ಮುಖ್ಯ ಅತಿಥಿಗಳಾಗಿ ಶಿವಾನಂದ ಪಟ್ಟಣಶೆಟ್ಟಿ, ಆನಂದ ಪೋತ್ನೀಸ್, ರವಿ ಮೂಲಿಮನಿ, ಶ್ರೀನಿವಾಸ್ ಹುಯಿಲಗೋಳ, ವಾಸಣ್ಣ ಕುರಡಗಿ, ರವೀಂದ್ರನಾಥ ದಂಡಿನ್, ವೀರನಗೌಡ ಪಾಟೀಲ, ಎಸ್. ವೈ. ಚಿಕ್ಕಟ್ಟಿ, ವಿನೋದ್ ಜೈನ್, ವಿಜಯಕುಮಾರ ಆಲ್ಮಟ್, ಶರಣ್ ರಡ್ಡೇರ್ ಸೇರಿದಂತೆ ಹಲವರು ಆಗಮಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಬ್ರಹ್ಮಕುಮಾರಿ ರೇಖಾ ಅಕ್ಕನವರು ಹಾಗೂ ಬ್ರಹ್ಮಕುಮಾರಿ ಜೋಸ್ನಾ ಅಕ್ಕನವರು ಉಪಸ್ಥಿತರಿದ್ದರು.

### ಭಾರತ–ಪಾಕ್ ಪಂದ್ಯ ವೀಕ್ಷಿಸಬೇಡಿ; ಫೆ.14 ಪ್ರೇಮಿಗಳ ದಿನಾಚರಣೆಗೆ ವಿರೋಧ

# ವಂದೇ ಮಾತರಂ ಕಡ್ಡಾಯ ನಿರ್ಧಾರ ಸ್ವಾಗತಾರ್ಹ–ಪ್ರಮೋದ್ ಮುತಾಲಿಕ್




ಕರ್ನಾಟಕದಲ್ಲಿ 'ಲವ್ ಜಿಹಾದ್' ಪ್ರಕರಣಗಳು ಹೆಚ್ಚುತ್ತಿವೆ. ಯುವತಿಯರು ಜೀವನ ಹಾಳು ಮಾಡಿಕೊಳ್ಳುತ್ತಿದ್ದಾರೆ. ಶ್ರೀರಾಮ ಸೇನೆಯಿಂದ ಸಹಾಯವಾಣಿ ಆರಂಭಿಸಿದ್ದು, ಪ್ರತಿದಿನ ನಾಲ್ಕೈದು ದೂರುಗಳು ಬರುತ್ತಿವೆ. ಪಾಲಕರು ಮಕ್ಕಳಿಗೆ ಸಂಸ್ಕಾರ ನೀಡಬೇಕು. ಮಠಾಧೀಶರು ಸಮಾಜವನ್ನು ಎಚ್ಚರಿಸಬೇಕು ಎಂದು ಹೇಳಿದರು.

– **ಶ್ರೀ ಸತ್ಯಪ್ರಮೋದೇಂದ್ರ ಸರಸ್ವತಿ ಸ್ವಾಮಿಜಿ,** ರಾಜ್ಯ ಗೌರವಾಧ್ಯಕ್ಷ

### "ಭಾರತ–ಪಾಕ್ ಪಂದ್ಯ ವೀಕ್ಷಿಸಬಾರದು"

ಟಿ–20 ವಿಶ್ವಕಪ್‌ನಲ್ಲಿ ಫೆಬ್ರವರಿ 15ರಂದು ಭಾರತ ಪಾಕಿಸ್ತಾನ ವಿರುದ್ಧ ಆಡಲಿದೆ. ಪೆಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಮೃತಪಟ್ಟಿದ್ದಾರೆ. ಅವರ ಕುಟುಂಬದ ಕಣ್ಣೀರು ಇನ್ನೂ ಒಣಗಿಲ್ಲ. ಇಂತಹ ಸಂದರ್ಭದಲ್ಲಿ ಪಂದ್ಯ ಆಡುವುದು ಸರಿಯಲ್ಲ. ಭಾರತೀಯರು ಫೆ.15ರ ಪಂದ್ಯವನ್ನು ವೀಕ್ಷಿಸಬಾರದು ಎಂದು ಪ್ರಮೋದ್ ಮುತಾಲಿಕ್ ಮನವಿ ಮಾಡಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ವಂದೇ ಮಾತರಂ ಗೀತೆ ರಚನೆಯಾಗಿ 150 ವರ್ಷಗಳು ಪೂರ್ಣಗೊಂಡ ಹಿನ್ನಲೆಯಲ್ಲಿ ರಾಷ್ಟ್ರಗೀತೆಯ ಜೊತೆಗೆ ಪ್ರತಿದಿನ ವಂದೇ ಮಾತರಂ ಗೀತೆಯನ್ನು ಕಡ್ಡಾಯಗೊಳಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಶ್ರೀರಾಮ ಸೇನೆ ಸ್ವಾಗತಿಸುತ್ತದೆ ಎಂದು ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಂದೇ ಮಾತರಂ ಗೀತೆಯಲ್ಲಿ ಭಾರತದ ಮಹಿಮೆ ಹಾಗೂ ಸ್ವಾತಂತ್ರ್ಯ ಹೋರಾಟದ ಆತ್ಮವಿದೆ. ಕ್ರಾಂತಿಕಾರಿಗಳು ವಂದೇ ಮಾತರಂ ಘೋಷಣೆ ಕೂಗಿ ಲಾಠಿ ದಾಳಿಯನ್ನು ಎದುರಿಸಿದ್ದಾರೆ. ಮುಸ್ಲಿಂ ಓಲೈಕೆಗಾಗಿ ಕಾಂಗ್ರೆಸ್ ಪಕ್ಷ ಈ ಗೀತೆಯನ್ನು ತುಂಡರಿಸಿ ದೇಶದ್ರೋಹಿ ಕೆಲಸ ಮಾಡಿದೆ ಎಂದು ಆರೋಪಿಸಿದರು.

ಮುಂದಿನ ದಿನಗಳಲ್ಲಿ 150 ಜನರ ತಂಡ ರಚಿಸಿ ಸಾಮೂಹಿಕವಾಗಿ ವಂದೇ ಮಾತರಂ ಗೀತೆಯನ್ನು ಶ್ರೀರಾಮ ಸೇನೆಯಿಂದ ಹಾಡಿಸಲಾಗುವುದು ಎಂದು ತಿಳಿಸಿದರು.

ಫೆಬ್ರವರಿ 14ರಂದು ನಡೆಯುವ ಪ್ರೇಮಿಗಳ ದಿನಾಚರಣೆಯನ್ನು ಹಿಂದಿನಿಂದಲೂ ವಿರೋಧಿಸುತ್ತಿದ್ದೇವೆ. ಪ್ರೇಮಿಗಳ ದಿನಾಚರಣೆ ನೆಪದಲ್ಲಿ ಡ್ರಗ್ಸ್, ಕುಡಿತ, ಅತ್ಯಾಚಾರ, ಅಪಹರಣ ▸▸2ನೇ ಪುಟಕ್ಕೆ

## ಮಹಾ ಶಿವರಾತ್ರಿ ಹಬ್ಬದ ನಿಮಿತ್ತ ತ್ರಿಕೂಟೇಶ್ವರ ದೇವರ ಹಾಡು

### ನಮೋ ತ್ರಿಕೂಟೇಶ್ವರ ಕರುಣಾಸಾಗರ



ನಮೋ ತ್ರಿಕೂಟೇಶ್ವರ ಕರುಣಾಸಾಗರ
ನಯನಮನೋಹರ ನಂಜುಂಡೇಶ್ವರ

ತ್ರಿಶೂಲಪಾಣಿಯೇ ತ್ರಯಂಬಕೇಶ್ವರ
ಬ್ರಹ್ಮ ವಿಷ್ಣು ಮಹೇಶ್ವರರ ಸಾಕ್ಷಾತ್ಕಾರ

ಅಭಿಷೇಕಪ್ರಿಯ ಅನಂತ ಮಹಿಮ
ಅಭಯ ಪ್ರದಾಯಕ ಅಂಬುಜೋದ್ಭವಸುತ

ಬಿಲ್ವ ಪತ್ರಾಲಂಕಾರ ಭುಜಂಗಹಾರಾ
ಭವಭಯ ಪರಿಹಾರ ಪಶುಪತಿನಾಥ

ನಿರ್ಮಲ ಮನದಿಂದ ನಿನ್ನ ನೆನೆದವರ
ದುಃಖವ ಕಳೆವ ಮನೋನಿಯಾಮಕ

ಬೇಡಿದ ಭಕ್ತರ ಅಭೀಷ್ಟೆಯ ಪೂರೈಪ
ಕೃತಪುರದಲಿ ಅನುದಿನವು ಪೂಜಿಪ

ಸರಸ್ವತಿ, ಗಾಯತ್ರಿ, ಸಾವಿತ್ರಿ,
ಅಷ್ಟಭುಜಗಳುಳ್ಳ ಮಹಾಗಣಪತಿ
ಸೂರ್ಯನಾರಾಯಣ ದೇವರಿಂದೊಡಗೂಡಿ
ವಿರಾಜಿಪ ತ್ರಿಲೋಚನ ಭವ್ಯ ತ್ರಿಕೂಟೇಶ್ವರ

ಮಹಾಶಿವರಾತ್ರಿಯ ಆ ಶುಭದಿನದಂದು
ನಿನ್ನ ದರ್ಶನ ತೋರೋ ಸಾಂಬಸದಾಶಿವ

ನಿನ್ನ ದರ್ಶನದಿ ಧನ್ಯವಾಗುವುದೆನ್ನ ಜೀವನ
ನಿನ್ನ ಸೇವೆಯಿಂದ ಪಾವನಗೊಳಿಸೋ ಎನ್ನ

ಪಂಚಾನನ ಹರ ಪರಮಭಾಗವತ
ಭಕ್ತಿಯಂಕುರವನು ನಿರುತದಿ ಪಾಲಿಸು

**– ಅಂಜನಾ ರಾಘವೇಂದ್ರ ಕುಬೇರ.**
ಗದಗ.

### ಶಕ್ತಿ ಯೋಜನೆ: ಮಹಿಳೆಯರ ಚಲನವಲನಕ್ಕೆ ಹೊಸ ಶಕ್ತಿ

# ಮಹಿಳೆಯರ ಸಂಚಾರ ಸ್ವಾತಂತ್ರ‍್ಯಕ್ಕೆ ಬಲ

ಕರ್ನಾಟಕ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆ ರಾಜ್ಯದ ಮಹಿಳೆಯರ ಬದುಕಿನಲ್ಲಿ ಸ್ಪಷ್ಟವಾದ ಬದಲಾವಣೆಯನ್ನು ತರಲು ಕಾರಣವಾಗಿದೆ. ಸರ್ಕಾರಿ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯ ಕಲ್ಪಿಸುವ ಈ ಯೋಜನೆ, ಕೇವಲ ಸಾರಿಗೆ ಸೌಲಭ್ಯವಷ್ಟೇ ಅಲ್ಲದೆ ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣದ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದೆ.

ಶಕ್ತಿ ಯೋಜನೆ ಜಾರಿಯಾದ ನಂತರ ಗ್ರಾಮೀಣ ಹಾಗೂ ನಗರ ಪ್ರದೇಶಗಳ ಮಹಿಳೆಯರ ಸಂಚಾರ ಸ್ವಾತಂತ್ರ‍್ಯ ಹೆಚ್ಚಾಗಿದೆ. ಉದ್ಯೋಗ, ಶಿಕ್ಷಣ, ಆರೋಗ್ಯ ಸೇವೆಗಳು ಹಾಗೂ ಸ್ವ-ಉದ್ಯಮಗಳಿಗಾಗಿ ಮಹಿಳೆಯರು ಈಗ ಹೆಚ್ಚು ಆತ್ಮವಿಶ್ವಾಸದಿಂದ ಪ್ರಯಾಣಿಸುತ್ತಿದ್ದಾರೆ. ಹಿಂದೆ ಪ್ರಯಾಣ ವೆಚ್ಚದ ಕಾರಣದಿಂದ ನಿರ್ಬಂಧಿತವಾಗಿದ್ದ ಅನೇಕ ಅವಕಾಶಗಳು ಈಗ ಮಹಿಳೆಯರಿಗೆ ಸುಲಭವಾಗಿ ಲಭ್ಯವಾಗುತ್ತಿವೆ.

ಈ ಯೋಜನೆಯ ದೊಡ್ಡ ಪರಿಣಾಮ ಕುಟುಂಬದ ಆರ್ಥಿಕ ಸ್ಥಿತಿಯ ಮೇಲೆ ಕಂಡುಬಂದಿದೆ. ದಿನನಿತ್ಯದ ಪ್ರಯಾಣ ವೆಚ್ಚ ಉಳಿದಿರುವುದರಿಂದ ಕುಟುಂಬಗಳ ಉಳಿತಾಯ ಹೆಚ್ಚಾಗಿದೆ. ವಿಶೇಷವಾಗಿ ಕಾರ್ಮಿಕ ವರ್ಗದ ಮಹಿಳೆಯರಿಗೆ ಇದು ಮಹತ್ತರ ನೆರವಾಗಿದೆ. ಕೆಲಸದ ಸ್ಥಳಗಳಿಗೆ ನಿರಂತರವಾಗಿ ಹೋಗಲು ಸಾಧ್ಯವಾಗುತ್ತಿರುವುದರಿಂದ ಅವರ ಆದಾಯ ಸ್ಥಿರವಾಗಿದೆ.



ಶಕ್ತಿ ಯೋಜನೆ ಮಹಿಳಾ ಶಿಕ್ಷಣಕ್ಕೂ ಉತ್ತೇಜನ ನೀಡಿದೆ. ಕಾಲೇಜು ಮತ್ತು ತರಬೇತಿ ಕೇಂದ್ರಗಳಿಗೆ ಹೋಗುವ ವಿದ್ಯಾರ್ಥಿನಿಯರ ಸಂಖ್ಯೆಯಲ್ಲಿ ಏರಿಕೆ ಕಂಡುಬಂದಿದೆ. ದೂರದ ಊರುಗಳಿಂದ ನಗರಗಳಿಗೆ ಶಿಕ್ಷಣಕ್ಕಾಗಿ ಪ್ರಯಾಣಿಸುವ ವಿದ್ಯಾರ್ಥಿನಿಯರಿಗೆ ಈ ಯೋಜನೆ ಆಶಾಕಿರಣವಾಗಿದೆ.

ಸಾಮಾಜಿಕವಾಗಿ ನೋಡಿದರೆ, ಈ ಯೋಜನೆ ಮಹಿಳೆಯರ ಭಾಗವಹಿಸುವಿಕೆಯನ್ನು ಸಾರ್ವಜನಿಕ ಬದುಕಿನಲ್ಲಿ ಹೆಚ್ಚಿಸಿದೆ. ಸ್ವಸಹಾಯ ಸಂಘಗಳು, ಮಾರುಕಟ್ಟೆ ಚಟುವಟಿಕೆಗಳು, ಸರ್ಕಾರಿ ಕಚೇರಿಗಳ ಸಂಪರ್ಕ ಎಲ್ಲವೂ ಸುಲಭವಾಗಿದೆ. ಮಹಿಳೆಯರ ಚಲನವಲನ ಹೆಚ್ಚಿದಂತೆ ಅವರ ಧ್ವನಿ ಮತ್ತು ಹಕ್ಕುಗಳ ಅರಿವು ಕೂಡ ವಿಸ್ತರಿಸಿದೆ.

ಸಾರಿಗೆ ಇಲಾಖೆಯ ದೃಷ್ಟಿಯಿಂದಲೂ ಶಕ್ತಿ ಯೋಜನೆ ಒಂದು ದೊಡ್ಡ ಕಾರ್ಯಾಚರಣೆ.

ಹೆಚ್ಚಿದ ಪ್ರಯಾಣಿಕರ ಸಂಖ್ಯೆಯನ್ನು ನಿರ್ವಹಿಸಲು ಬಸ್‌ಗಳ ಸಂಖ್ಯೆ, ವೇಳಾಪಟ್ಟಿ ಹಾಗೂ ಸೇವಾ ಗುಣಮಟ್ಟವನ್ನು ಸುಧಾರಿಸುವ ಅಗತ್ಯ ಮೂಡಿದೆ. ಇದು ಸಾರ್ವಜನಿಕ ಸಾರಿಗೆ ವ್ಯವಸ್ಥೆಯ ಸಮಗ್ರ ಅಭಿವೃದ್ಧಿಗೆ ಕಾರಣವಾಗಿದೆ.

ಒಟ್ಟಿನಲ್ಲಿ, ಶಕ್ತಿ ಯೋಜನೆ ಕೇವಲ ಉಚಿತ ಪ್ರಯಾಣ ಸೌಲಭ್ಯವಲ್ಲ; ಅದು ಮಹಿಳೆಯರ ಜೀವನಮಟ್ಟವನ್ನು ಸುದಾರಿಸುವ ಸಾಮಾಜಿಕ ಚಳುವಳಿಯಂತಾಗಿದೆ.

ಆರ್ಥಿಕ ಉಳಿತಾಯ, ಶಿಕ್ಷಣದ ಅವಕಾಶ, ಉದ್ಯೋಗದ ಪ್ರವೇಶ ಹಾಗೂ ಸ್ವಾವಲಂಬನೆಯ ದಿಕ್ಕಿನಲ್ಲಿ ಈ ಯೋಜನೆ ನಿಜವಾದ ಶಕ್ತಿಯಾಗಿ ಪರಿಣಮಿಸಿದೆ. ಮಹಿಳೆಯರ ಸಬಲೀಕರಣವೇ ರಾಜ್ಯದ ಪ್ರಗತಿಯ ಆಧಾರ ಎಂಬುದನ್ನು ಈ ಯೋಜನೆ ಸ್ಪಷ್ಟವಾಗಿ ತೋರಿಸಿದೆ.

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆ ಮಹಿಳೆಯರ ದೈನಂದಿನ ಬದುಕಿನಲ್ಲಿ ಮಹತ್ವದ ಬದಲಾವಣೆ ತಂದಿದೆ. ಮಹಿಳೆಯರಿಗೆ ಸರ್ಕಾರಿ ಬಸ್‌ಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಒದಗಿಸುವ ಮೂಲಕ ಅವರ ಸಂಚಾರ ಸ್ವಾತಂತ್ರ‍್ಯವನ್ನು ವಿಸ್ತರಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಒಟ್ಟಿನಲ್ಲಿ ಶಕ್ತಿ ಯೋಜನೆ ಮಹಿಳೆಯರ ಸಬಲೀಕರಣದ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದ್ದು, ಅವರ ಆತ್ಮವಿಶ್ವಾಸ ಹಾಗೂ ಸಾಮಾಜಿಕ ಭಾಗವಹಿಸುವಿಕೆಯನ್ನು ಹೆಚ್ಚಿಸುವಲ್ಲಿ ಪರಿಣಾಮಕಾರಿ ಸಾಧನವಾಗಿದೆ. ರಾಜ್ಯದ ಸಮಗ್ರ ಅಭಿವೃದ್ಧಿಗೆ ಮಹಿಳೆಯರ ಸಕ್ರಿಯ ಪಾತ್ರ ಅಗತ್ಯವೆಂಬುದನ್ನು ಈ ಯೋಜನೆ ಮತ್ತೊಮ್ಮೆ ಸಾಬೀತುಪಡಿಸಿದೆ.

**– ಹನುಮಂತ ಬೆಂತೂರ.**
ಅಪ್ರೆಂಟಿಸ್, ವಾರ್ತಾ ಮತ್ತು ಸಾ.ಸಂ.ಇಲಾಖೆ, ಗದಗ.

ಶಕ್ತಿ ಯೋಜನೆ ಮುಖ್ಯಮಂತ್ರಿ ಸಿದ್ಧರಾಮಯ್ಯನ ನೇತೃತ್ವದಲ್ಲಿ 11 ಜೂನ್ 2023ರಿಂದ ಜಾರಿಗೆ ಬಂದಿದೆ. ಮಹಿಳೆಯರಿಗೆ ಉಚಿತ ಸಾರ್ವಜನಿಕ ಬಸ್ ಪ್ರಯಾಣದ ಮೂಲಕ ಯಶಸ್ವಿಯಾಗಿ 500 ಕೋಟಿಗೂ ಅಧಿಕ ಉಚಿತ ಪ್ರಯಾಣಗಳು ಹಾಗೂ 12,500 ಕೋಟಿಗೂ ಹೆಚ್ಚು ಟಿಕೆಟ್ ಮೌಲ್ಯಗಳನ್ನು ರಾಜ್ಯದ ಮಹಿಳೆಯರು ಪಡೆದಿದ್ದಾರೆ. ದೈನಂದಿನ ಪ್ರಯಾಣದ ಸಂಖ್ಯೆಯಲ್ಲಿ ಸಹ ಪರಿಣಾಮಕಾರಿ ಏರಿಕೆ ಕಂಡುಬಂದಿದೆ ಮತ್ತು ಸಮಗ್ರವಾಗಿ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಮಹಿಳೆಯರಿಗೆ ಪ್ರಯಾಣದ ನಿರ್ಬಂಧ ಇಲ್ಲದೇ ಅವಕಾಶ ಸುಲಭವಾಗಿದೆ.

### ಜಿಲ್ಲೆಯಲ್ಲಿ ಶಕ್ತಿ ಯೋಜನೆಯ ಪ್ರಗತಿ

ಶಕ್ತಿ ಯೋಜನೆ ಆರಂಭದ ದಿನಾಂಕ 11-6-2023ರಿಂದ 31-1-2026ರವರೆಗೆ ಗದಗ ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ 25.54 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದು 863.57 ಕೋಟಿ ರೂ.ಗಳ ಶೂನ್ಯ ಟಿಕೇಟ್ ವಿತರಿಸಿದೆ. ಆ ಪೈಕಿ ತಾಲೂಕಾವಾರು ಶೂನ್ಯ ಟಿಕೇಟ್ ನೀಡಿದ ಮೊತ್ತದ ವಿವರ ಇಂತಿದೆ (ಕೋಟಿ ರೂ.ಗಳಲ್ಲಿ) :ಗದಗ-128.46, ರೋಣ-58.81, ಲಕ್ಷ್ಮೇಶ್ವರ-67.75, ನರಗುಂದ-60.78, ಮುಂಡರಗಿ-51.67, ಗಜೇಂದ್ರಗಡ-20.86, ಶಿರಹಟ್ಟಿ- 475.20.

## ಯೋಗಾಸನ ಕ್ರೀಡಾಕೂಟದಲ್ಲಿ ಗದಗ ಜಿಲ್ಲೆಯ ಸಾಧನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಸ್ಪೋರ್ಟ್ಸ್ ಅಸೋಸಿಯೇಶನ್ ಬೆಂಗಳೂರು ಇವರು ಜೆ.ಸಿ.ಐ ಗೋಕಾಕ ಮತ್ತು ಶ್ರೀ ಸ್ವಾಮಿ ವಿವೇಕಾನಂದ ಯೋಗ ಮತ್ತು ಸಂಸ್ಕೃತಿ ವಿಕಾಸ ಸಂಘ ಗೋಕಾಕ ಇವರ ಸಹಯೋಗದಲ್ಲಿ ಇತ್ತೀಚೆಗೆ ಗೋಕಾಕದ ಶ್ರೀ ಮಹಾಲಕ್ಷ್ಮೀ ಸಭಾಭವನದಲ್ಲಿ ನಡೆಸಿದ 4ನೇ ಕರ್ನಾಟಕ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಲೀಗ್ ಸ್ಪರ್ಧೆಗಳಲ್ಲಿ ಗದಗ ಜಿಲ್ಲೆಯಿಂದ ಒಟ್ಟು 30 ಸ್ಪರ್ಧಿಗಳು ಭಾಗವಹಿಸಿ ಹೆಚ್ಚಿನ ಸಂಖ್ಯೆಯಲ್ಲಿ ವಿಜೇತರಾಗಿ ಗದಗ ಜಿಲ್ಲೆಯ ಹಿರಿಮೆಯನ್ನು ಹೆಚ್ಚಿಸಿದ್ದಾರೆ.

ವಯೋಮಿತಿ ಆಧಾರದ ಮೇರೆಗೆ ಸ್ಪರ್ಧೆಗಳು ನಡೆದಿದ್ದು, ಗದಗ ಜಿಲ್ಲೆಯಿಂದ ಭಾಗವಹಿಸಿದವರಲ್ಲಿ ಚೇತನ ಕೋಟೆಗೌಡ್ರ, ನವೀನ ಪಲ್ಲೇದ, ಗಣೇಶ ವರ್ಣೇಕರ, ಶುಶೃತ ಗುಡಗೂರ, ವೆಂಕಟೇಶ ಹಾಲನ್ನವರ, ಶ್ರೇಯಸ್ ಶೀಲವಂತರ, ಪ್ರಶಾಂತ ಗಾಣಿಗೇರ, ಆಕಾಶ ಗುಡ್ಡಮಠ, ಮಲ್ಲಯ್ಯ ಕಲಹಾಳ, ಬಸವರಾಜ ಗಾಳಪ್ಪನವರ, ಕೆ. ಎಸ್. ಪಲ್ಲೇದ, ಅರ್ಪ ಬೆಟಗೇರಿ, ಶ್ರೀನವನಿಧಿ, ಸೃಷ್ಟಿ ಶಿರಿಯಮ್ಮನವರ, ಗೌರಿ ನೀಲಗುಂದ, ಶ್ರಾವಣಿ ಗುಡಗೂರ, ಲಕ್ಷ್ಮೀ ಬಸರಿ, ಪ್ರೇಮಾಮೃತವಾಣಿ, ದಿವ್ಯಾರಾಣಿ ಸಾಳೇರ, ಸಂಜನಾ ಸಜ್ಜನರ, ನಿರ್ಮಲ ಕೊಟ್ರನ್ನವರ, ಜ್ಯೋತಿ ಶೆಟ್ಟಿ, ಕವಿತಾ ಗಾಳಪ್ಪನವರ, ಶಿಲ್ಪಾ ಅಬ್ಬಿಗೇರಿ, ಚೈತ್ರಾ ಸೋಮನಗೌಡ್ರ, ಸುನಿತಾ ಓಲಿ, ಗೀತಾ ಹೂಗಾರ, ಜಯಶ್ರೀ ಡಾವಣಗೇರಿ, ಕಮಲಾ ಬೆಳ್ಳಿಕೊಪ್ಪ ಎಲ್ಲರೂ ಸ್ಥಾನ ಪಡೆದು ವಿಜೇತರಾಗಿದ್ದಾರೆ.

ಗದುಗಿನ ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆ ಮತ್ತು ನಿತ್ಯಂ ಯೋಗ ಕೇಂದ್ರ ಇವರು ತಂಡ ಪ್ರಶಸ್ತಿ ಪಡೆದಿರುವರು. ತಂಡ ಪ್ರಸ್ತಿಯನ್ನು ಲೋಕೋಪಯೋಗಿ ಮತ್ತು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಎಲ್. ಜಾರಕಿಹೊಳಿ ವಿತರಿಸಿದರು. ಗದಗ ಜಿಲ್ಲೆಯಿಂದ ಸುಮಂಗಲಾ ಹದ್ಲಿ ನಿರ್ಣಾಯಕರಾಗಿ, ಕೆ.ಎಸ್. ಪಲ್ಲೇದ ನಿರ್ದೇಶಕರಾಗಿ ಕಾರ್ಯ ನಿರ್ವಹಿಸಿದರು.

ಜಿಲ್ಲೆಯ ಹಿರಿಮೆ ಹೆಚ್ಚಿಸಿರುವ ಸ್ಪರ್ಧಿಗಳಿಗೆ, ವಿಜೇತರಿಗೆ, ಸಹಕರಿಸಿದ ಪಾಲಕರಿಗೆ, ಸಂಘಟಕರಿಗೆ, ಪ್ರೋತ್ಸಾಹಿಸಿದ ಅಭಿಮಾನಿಗಳಿಗೆ, ತರಬೇತುದಾರರೆಲ್ಲರಿಗೂ ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ, ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಅಧ್ಯಕ್ಷ ಕೆ.ಎಸ್. ಪಲ್ಲೇದ ಮತ್ತು ಸದಸ್ಯರು ಅಭಿನಂದಿಸಿದ್ದಾರೆ.



## ಜೀತ ಪದ್ಧತಿ ನಿರ್ಮೂಲನೆ ಪ್ರತಿಯೊಬ್ಬರ ಕರ್ತವ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಜೀತ ಪದ್ಧತಿಯ ನಿರ್ಮೂಲನೆ ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕಾರ್ಮಿಕ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಡತನ ಅಥವಾ ಸಾಲದ ಕಾರಣಕ್ಕಾಗಿ ಸಾಲ ತೀರಿಸುವವರೆಗೂ ಭೂಮಾಲೀಕ ಅಥವಾ ಲೇವಾದೇವಿಗಾರರ ಬಳಿ ಉಚಿತವಾಗಿ ಅಥವಾ ಅತ್ಯಲ್ಪ ವೇತನಕ್ಕೆ ಬಲವಂತವಾಗಿ ದುಡಿಯುವ ಅಮಾನವೀಯ ಪದ್ಧತಿಯೇ ಜೀತ ಪದ್ಧತಿಯಾಗಿದೆ. ಇದು ಶೋಷಣೆಯ ಒಂದು ರೂಪ. ಜೀತಕ್ಕೆ ಇಟ್ಟುಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಜೀತ ಪದ್ಧತಿಗೆ ಅನಕ್ಷರತೆ, ಬಡತನ, ಅಸಹಾಯಕತೆ ಮುಖ್ಯ ಕಾರಣಗಳಾಗಿವೆ. ಎಲ್ಲಿ ಅಸಮಾನತೆ ಬರುತ್ತದೆಯೋ ಅಲ್ಲಿ ಜೀತ ಪದ್ಧತಿ ಆರಂಭವಾಗುತ್ತದೆ. ಮಕ್ಕಳಿಗೆ ಶಿಕ್ಷಣ ಒದಗಿಸುವುದು ಇಂದಿನ ಅಗತ್ಯವಾಗಿದೆ. ಜೀತ ಪದ್ಧತಿ ನಿರ್ಮೂಲನೆ ಕುರಿತು ಸಾರ್ವಜನಿಕರಲ್ಲಿ ವ್ಯಾಪಕವಾಗಿ ತಿಳುವಳಿಕೆ ನೀಡುವುದು ಅವಶ್ಯಕವಾಗಿದೆ ಎಂದರು.

ವಕೀಲರಾದ ಗುರುರಾಜ ಗೌರಿ ಮಾತನಾಡಿ, ಜೀತ ಪದ್ಧತಿ ನಿರ್ಮೂಲನಾ ಕಾಯ್ದೆ 1976ರಡಿಯಲ್ಲಿ ಇದನ್ನು ನಿಷೇಧಿಸಲಾಗಿದೆ. ಜೀತ ವಿಮುಕ್ತರಿಗೆ ಸರ್ಕಾರವು ಪುನರ್ವಸತಿ ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸುತ್ತದೆ. ಜೀತ ಪದ್ಧತಿಯನ್ನು ಗುರುತಿಸಿ ಸಂಬಂಧಿಸಿದವರ ಗಮನಕ್ಕೆ ತಂದು ಕಾನೂನಿನ ಪ್ರಕಾರ ಶಿಕ್ಷೆ ಕೊಡುವುದಕ್ಕೂ ಮುಂಚೆ ಅಲ್ಲಿ ಆಗುವ ಅನಾಹುತಗಳ ಬಗ್ಗೆ ತಿಳುವಳಿಕೆ, ಮಾಹಿತಿಯನ್ನು ಸಾರ್ವಜನಿಕರಿಗೆ ತಲುಪಿಸುವ ಅವಶ್ಯಕತೆಯಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ವಂದೇ ಮಾತರಂ ಕಡ್ಡಾಯ ನಿರ್ಧಾರ ಸ್ವಾಗತಾರ್ಹ-ಪ್ರಮೋದ್ ಮುತಾಲಿಕ್

**▶▶ಮೊದಲನೇ ಪುಟದಿಂದ**

ಪ್ರಕರಣಗಳು ಹೆಚ್ಚುತ್ತಿವೆ. ಇಂತಹ ವಿಕೃತಿ ಕಂಡುಬಂದರೆ ಶ್ರೀರಾಮ ಸೇನೆ ಕಾರ್ಯಕರ್ತರು ವೀಕ್ಷಣೆ ನಡೆಸಲಿದ್ದಾರೆ ಎಂದು ಎಚ್ಚರಿಸಿದರು.

ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ಹಲ್ಲೆ, ಅತ್ಯಾಚಾರ ಪ್ರಕರಣಗಳು ನಡೆಯುತ್ತಿವೆ. ಈ ವಿಚಾರದಲ್ಲಿ ಕೇಂದ್ರ ಸರ್ಕಾರ ಕೈಕಟ್ಟಿ ಕುಳಿತಿರುವುದು ಸರಿಯಲ್ಲ. ದೇಶದಲ್ಲಿ ಸುಮಾರು 5 ಕೋಟಿಗೂ ಅಧಿಕ ಅಕ್ರಮ ಬಾಂಗ್ಲಾ ವಲಸಿಗರು ಇದ್ದಾರೆ. ಕರ್ನಾಟಕದಲ್ಲಿ 15 ರಿಂದ 20 ಲಕ್ಷ ಮಂದಿ ಅಕ್ರಮ ವಲಸಿಗರು ನೆಲೆಸಿದ್ದಾರೆ. ಅವರನ್ನು ಕೂಡಲೇ ಹೊರಹಾಕಬೇಕು ಎಂದು ಒತ್ತಾಯಿಸಿದರು.

ಚಾಮರಾಜಪೇಟೆಯಲ್ಲಿ 25 ಸಾವಿರಕ್ಕೂ ಹೆಚ್ಚು ಬಾಂಗ್ಲಾ ಹಾಗೂ ರೋಹಿಂಗ್ಯಾ ಮುಸ್ಲಿಮರು ಇದ್ದು, ಅವರನ್ನು ಮತ ಬ್ಯಾಂಕ್ ಆಗಿ ಬಳಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು.

## ಸಂತ ಸೇವಾಲಾಲ್ ಜನ್ಮಸ್ಥಳದಲ್ಲಿ ಭಕ್ತಿಭಾವದ ಕಾರ್ಯಕ್ರಮ!



**■ವಿಜಯಸಾಕ್ಷಿ ಸುದ್ದಿ, ಸೂರಿಗೊಂಡನಕೊಪ್ಪ**

ಬಂಜಾರ ಧರ್ಮಗುರುಗಳಾದ ಶ್ರೀ ಸಂತ ಸೇವಾಲಾಲ್ ಮಹಾರಾಜರ ಜನ್ಮಸ್ಥಳ ಸೂರಿಗೊಂಡನ ಕೊಪ್ಪದಲ್ಲಿ ಭಕ್ತಿಭಾವದ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ನಾಗಾವಿ ತಾಂಡಾ, ಅಡವಿಸೋಮಾಪುರ ಹಾಗೂ ದಿಂಡೂರು ತಾಂಡಾದ ಬಂಜಾರ ಸಮಾಜದ ಗಾಯಕರಾದ ಸುನೀಲ್ ಲಕ್ಷ್ಮಣ್ ಪವಾರ್, ಸಂತೋಷ್ ನಾರಾಯಣ ಪವಾರ್, ವಿಠಲ್ ಭೀಮಪ್ಪ ಲಮಾಣಿ, ರೀತಂ ಚಂದ್ರು ಲಮಾಣಿ, ಪುಂಡಲೀಕ ವಾಸಪ್ಪ ಲಮಾಣಿ, ವಿಜಯ್ ರವಿ ನಾಯಕ, ಮಾರುತಿ ಮಾನಪ್ಪ ಲಮಾಣಿ, ರಮೇಶ್ ಲಕ್ಷ್ಮಣ್ ಪೂಜಾರ, ತರುಣ ಕೃಷ್ಣಪ್ಪ ರಾಠೋಡ್ ಹಾಗೂ ತಾವರಪ್ಪ ಗುರುನಾಥಪ್ಪ ಪವಾರ್ ಅವರು ಬಂಜಾರ ಸಮಾಜದ ಸಾಂಪ್ರದಾಯಿಕ ವೇಷಭೂಷಣ ಧರಿಸಿ ಶ್ರೀ ಸಂತ ಸೇವಾಲಾಲರ ಹಾಗೂ ತಾಯಿ ಮರಿಯುಮ್ಮ ದೇವಿಯ ಆಶೀರ್ವಾದ ಪಡೆದರು.

ಭಕ್ತಿಗೀತೆಗಳ ಗಾಯನದ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಲಾಯಿತು. ಸಮಾಜದ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ ಪಾತ್ರವಹಿಸುತ್ತಿವೆ ಎಂದು ಮುಖಂಡರು ಅಭಿಪ್ರಾಯಪಟ್ಟರು.

### ಅಖಿಲ ಭಾರತ ಮುಷ್ಕರದಲ್ಲಿ ಆರ್ ಎಸ್ ಬಸವರಾಜ ಒತ್ತಾಯ

# ಲೇಬರ್ ಕೋಡ್ ರದ್ದು ಪಡಿಸಿ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕಾರ್ಮಿಕರನ್ನು ಗುಲಾಮಗಿರಿಗೆ ತಳ್ಳುವ ಕೇಂದ್ರ ಸರ್ಕಾರದ 4 ಲೇಬರ್ ಕೋಡ್‌ಗಳನ್ನು ತಕ್ಷಣ ರದ್ದುಪಡಿಸಬೇಕು ಹಾಗೂ ಸಾರ್ವಜನಿಕ ಉದ್ದಿಮೆಗಳು ಮತ್ತು ಹಣಕಾಸು ವಲಯದ ಖಾಸಗೀಕರಣವನ್ನು ವಿರೋಧಿಸಬೇಕು ಎಂದು ಸಿಐಟಿಯು ರಾಜ್ಯ ಉಪಾಧ್ಯಕ್ಷ ಆರ್.ಎಸ್. ಬಸವರಾಜ ಆಗ್ರಹಿಸಿದರು.



ಪಟ್ಟಣದ ಬಸವೇಶ್ವರ ವೃತ್ತದಲ್ಲಿ 12-2-2026ರಂದು ನಡೆದ ಅಖಿಲ ಭಾರತ ಮುಷ್ಕರದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಸಿಪಿಎಂ ತಾಲೂಕು ಕಾರ್ಯದರ್ಶಿ ಬಿ. ಮಾಳಮ್ಮ ಮಾತನಾಡಿ, "ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಕಾಯ್ದೆ"ಗೆ ಬದಲಾಗಿ ವಿ.ಬಿ-ಜಿ.ರಾಮ್ ಜಿ. ಮಸೂದೆ ರೂಪಿಸುವ ಮೂಲಕ ಗ್ರಾಮೀಣ ಜನರ ಉದ್ಯೋಗ ಹಕ್ಕಿಗೆ ಧಕ್ಕೆ ಉಂಟುಮಾಡಲಾಗಿದೆ ಎಂದು ಆರೋಪಿಸಿದರು.

ಕಾಯ್ದೆ ತಿದ್ದುಪಡಿಯಿಂದ ಉದ್ಯೋಗ ಚೀಟಿ ನೀಡಿಕೆಯನ್ನು ಕಠಿಣಗೊಳಿಸಲಾಗಿದ್ದು, ಉದ್ಯೋಗ ವಿಳಂಬ ಪರಿಹಾರ ಮತ್ತು ನಿರುದ್ಯೋಗ ಭತ್ಯೆ ನೀಡುವ ಕೇಂದ್ರದ ಜವಾಬ್ದಾರಿಯನ್ನು ಹಿಂದಕ್ಕೆ ಪಡೆಯಲಾಗಿದೆ ಎಂದು ಹೇಳಿದರು.

ಈ ನೀತಿಗಳು ರೈತ ಕೂಲಿಕಾರರು ಹಾಗೂ ಮಹಿಳೆಯರ ವಿರೋಧಿಯಾಗಿವೆ. ಜನರ ಭಾವನೆಗಳನ್ನು ಕೆದಕುವ ಮೂಲಕ ಕೋಮುಭಾವನೆ ತುಂಬುವ ಅಪಾಯಕಾರಿ ಬೆಳವಣಿಗೆ ನಡೆಯುತ್ತಿದೆ. ಇದಕ್ಕೆ ಜಗ್ಗದೇ ರೈತರು, ಕಾರ್ಮಿಕರು ಮತ್ತು ಮಹಿಳೆಯರು ಒಗ್ಗಟ್ಟಿನಿಂದ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ರಾಜ್ಯ ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಜೆ.ಎಂ. ವೀರಸಂಗಯ್ಯ ಮಾತನಾಡಿ, ವಿದ್ಯುತ್ ತಿದ್ದುಪಡಿ ಮಸೂದೆ 2025 ಮೂಲಕ ವಿದ್ಯುತ್ ಉತ್ಪಾದನೆ, ವಿತರಣೆ ಮತ್ತು ಸಾಗಾಣಿಕೆಯನ್ನು ಸಂಪೂರ್ಣ ಖಾಸಗೀಕರಣಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ ಎಂದರು.

ಪ್ರೀ-ಪೇಡ್ ಹಾಗೂ ಪೋಸ್ಟ್-ಪೇಡ್ ಸ್ಮಾರ್ಟ್ ಮೀಟರ್ ಅಳವಡಿಕೆ ಕಡ್ಡಾಯಗೊಳ್ಳಲಿದೆ ಎಂದು ಹೇಳಿದರು. ಸಂಘಟಿತ ಹೋರಾಟ ಅಗತ್ಯ ಎಂದು ತಿಳಿಸಿದರು.

ಮುಷ್ಕರಕ್ಕೆ ಬೆಂಬಲ ಸೂಚಿಸಿ ಕೃಷಿಕ ಸಮಾಜದ ಅಧ್ಯಕ್ಷ ಕೆ.ಪಿ. ದೇವರಾಜ್ ಮಾತನಾಡಿದರು.

ಮುಷ್ಕರದಲ್ಲಿ ಅಂಗನವಾಡಿ, ಬಿಸಿಯೂಟ, ಕಟ್ಟಡ ಕಾರ್ಮಿಕರು, ಪಂಚಾಯತ್ ನೌಕರರು, ಸ್ವಚ್ಛವಾಹಿನಿ ಸಿಬ್ಬಂದಿ, ಒಂಟಿ ಮಹಿಳೆಯರು, ರೈತರು, ದೇವದಾಸಿ ಮಹಿಳೆಯರು ಸೇರಿದಂತೆ ನೂರಾರು ಜನರು ಭಾಗವಹಿಸಿದರು.

ಪ್ರತಿಭಟನೆಯಲ್ಲಿ ಎಂ. ಆನಂದ್, ಕೆ. ಗೌರಮ್ಮ, ಮಲ್ಲಮ್ಮ, ಜ್ಯೋತೇಶ್ವರಿ, ಮಾರೆಕ್ಕ, ಕರಿಬಸಮ್ಮ, ಕೆ.ಎಂ. ರಫೀ, ಎಂ. ಕೊಟ್ರೇಶ್, ಕೆ. ಅಂಜಿನಮ್ಮ, ಚರಂತ, ಸುರೇಶ್, ನಾಗರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸ್ವಾಗತ ಮತ್ತು ನಿರೂಪಣೆಯನ್ನು ಎಸ್. ಜಗನ್ನಾಥ ನಡೆಸಿದರು. ಲಕ್ಷ್ಮಣ ವಂದನಾರ್ಪಣೆ ಸಲ್ಲಿಸಿದರು.

# ಜೀವನ ದರ್ಶನ, ಮಹಾಶಿವರಾತ್ರಿ ಕಾರ್ಯಕ್ರಮ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯು 'ಜೀವನ ದರ್ಶನ' ಮಾಲಿಕೆ 56ನೇ ಮಾಸಿಕ ಕಾರ್ಯಕ್ರಮ ಹಾಗೂ ಮಹಾ ಶಿವರಾತ್ರಿ ಮಹೋತ್ಸವದ ಕಾರ್ಯಕ್ರಮವನ್ನು ಫೆ. 14ರಂದು ಸಂಜೆ 6.30 ಗಂಟೆಗೆ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಏರ್ಪಡಿಸಿದೆ.

ಸಾನ್ನಿಧ್ಯವನ್ನು ಲಕ್ಕುಂಡಿಯ ಅಲ್ಲಮಪ್ರಭು ದೇವರಮಠದ ಪೂಜ್ಯ ಸಿದ್ಧಲಿಂಗ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ಲ ವಹಿಸುವರು. ಸಮಿತಿಯ ಗೌರವಾಧ್ಯಕ್ಷ ಜಿ.ಜಿ. ಕುಲಕರ್ಣಿ, ಉಪಾಧ್ಯಕ್ಷ ಆರ್.ಆರ್. ಕಾಶಪ್ಪನವರ ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ಮಕ್ಕಳಿಂದ ಹಾಗೂ ಮಹಿಳೆಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಫೆ. 17ರಂದು ಸಂಜೆ 6.30 ಗಂಟೆಗೆ ಕಾಶೀ ವಿಶ್ವನಾಥನ ಪಾಲಕಿಸೇವೆ ಜರುಗಲಿದೆ. ಸರ್ವ ಭಕ್ತಾದಿಗಳು ಸಕಾಲಕ್ಕೆ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕಾರ್ಯದರ್ಶಿ ಕೆ.ಪಿ. ಗುಳಗೌಡರ ವಿನಂತಿಸಿದ್ದಾರೆ.

### ಕಾರ್ಮಿಕ ಸಂಹಿತೆಗಳ ಜಾರಿಗೆ ಕರಡು ನಿಯಮಗಳ ಪ್ರಕಟಣೆ; ಸಿಐಟಿಯು ಖಂಡನೆ

# ಕಾರ್ಮಿಕರಿಗೆ ದ್ರೋಹ ಬಗೆದ ಸರ್ಕಾರಗಳು

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕೇಂದ್ರ ಸರ್ಕಾರ ಕಾರ್ಮಿಕರ ವಿರೋಧದ ನಡುವೆಯೂ 4 ಕಾರ್ಮಿಕ ಸಂಹಿತೆಗಳನ್ನು ಜಾರಿಗೊಳಿಸಿ ಕರಡು ನಿಯಮಗಳನ್ನು ಪ್ರಕಟಿಸಿದೆ. ಇದರ ಬೆನ್ನಲ್ಲೇ ರಾಜ್ಯ ಕಾಂಗ್ರೆಸ್ ಸರ್ಕಾರ ಸಹ ಸಂಹಿತೆಗಳ ಜಾರಿಗೆ 'ಕೈಗಾರಿಕಾ ಸಂಬಂಧಗಳ (ಕರ್ನಾಟಕ) ಕರಡು ನಿಯಮಗಳು-2026' ಪ್ರಕಟಿಸುವ ಮೂಲಕ ರಾಜ್ಯದ ಕಾರ್ಮಿಕರಿಗೆ ದ್ರೋಹ ಬಗೆದಿವೆ ಎಂದು ಸಿಐಟಿಯು ಮುಖಂಡ ಎಂ.ಎಸ್. ಹಡಪದ ಆಕ್ರೋಶ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರದ ಸಂಹಿತೆಗಳ ರದ್ಧತಿಗೆ ಕಾರ್ಮಿಕ ಸಂಘಟನೆಗಳು ಫೆಬ್ರವರಿ 12ರಂದು ದೇಶವ್ಯಾಪಿ ಮುಷ್ಕರಕ್ಕೆ ಕರೆ ನೀಡಿದ್ದ ಹಿನ್ನೆಲೆಯಲ್ಲಿ ನಗರದ ತಹಸೀಲ್ದಾರ ಕಚೇರಿ ಮುಂಭಾಗದಲ್ಲಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯ ನೇತೃತ್ವದಲ್ಲಿ ನಡೆದ ಮುಷ್ಕರವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸಂವಿಧಾನದ ಅನುಚ್ಛೇದ 246ರ ಅನ್ವಯ ಕಾರ್ಮಿಕ ಕಾನೂನುಗಳು ಸಮವರ್ತಿ ಪಟ್ಟಿಯಲ್ಲಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳೆರಡು ಕಾನೂನುಗಳನ್ನು ರಚಿಸುವ ಅಧಿಕಾರ ಹೊಂದಿದೆ. ಆದರೆ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಕಾರ್ಮಿಕರ ಹಿತಾಸಕ್ತಿ ರಕ್ಷಿಸಲು ಕೇಂದ್ರದ ಬಿಜೆಪಿ ಸರ್ಕಾರ ರೂಪಿಸಿರುವ 4 ಕಾರ್ಮಿಕ ಸಂಹಿತೆಗಳನ್ನು ತಿರಸ್ಕರಿಸುವ, ಮಾರ್ಪಡಿಸುವ, ಹೊಸದಾಗಿ ಪರ್ಯಾಯ ಕಾರ್ಮಿಕ ಕಾನೂನು ರೂಪಿಸುವ ಸಂವಿಧಾನಬದ್ಧ ಅಧಿಕಾರ ಬಳಸುವ ಹೊಣೆಗಾರಿಕೆ ಇದ್ದಾವುದನ್ನು ಪ್ರದರ್ಶಿಸಿಲ್ಲ ಎಂದು ಕಿಡಿಕಾರಿದರು.

ಕಾರ್ಮಿಕ ವಿರೋಧಿಯಾಗಿ ಪ್ರಕಟಿಸಿರುವ ಕರಡು ನಿಯಮಗಳನ್ನು ಕೂಡಲೇ ವಾಪಸ್ಸು ಪಡೆಯಬೇಕು. ಆ ಮೂಲಕ ರಾಜ್ಯದಲ್ಲಿನ ಕಾರ್ಮಿಕರ ಸಂವಿಧಾನಬದ್ಧ ಮೂಲಭೂತ ಹಕ್ಕುಗಳನ್ನು ರಕ್ಷಣೆ ಮಾಡಬೇಕು ಎಂದರು.

ಡಿವಾಯ್‌ಎಫ್‌ಐ ಮುಖಂಡ ಎಫ್ ಎಫ್ ತೋಟದ ಮಾತನಾಡಿ, ತಾಲೂಕಿನ ಬಗರ್ ಹುಕ್ಕುಂ ಸಾಗುವಳಿದಾರ ರೈತರಿಗೆ ಹಕ್ಕುಪತ್ರಗಳನ್ನು ವಿತರಿಸಬೇಕು. ರಿಗ್ರಾಂಟ್ ಮೂಲಕ ತಾಲೂಕು ಬಗರ್ ಹುಕ್ಕುಂ ಸಮಿತಿ ಮೂಲಕ ರೈತರಿಗೆ ಹಕ್ಕು ಪತ್ರ ಆದೇಶವಾಗಿರುವರಿಗೆ ಆಕಾರ ಬಂದು, ಹಾಗೂ ಆರ್.ಟಿ.ಸಿ ಒಳಗೆ ಹೆಸರಿರುವ ರೈತರಿಗೆ ಪೋಡಿ ಮಾಡಿ ಕೊಡಬೇಕು ಎಂದು ಆಗ್ರಹಿಸಿದರು.

ಬೀದಿಬದಿ ವ್ಯಾಪರಸ್ಥರ ಸಂಘದ ಅಧ್ಯಕ್ಷ ಶಾಮೀದಸಾಬ ದಿಂಡವಾಡ ಮಾತನಾಡಿ, ಬೀದಿ ಬದಿ ವ್ಯಾಪಾರಿಗಳು ಸ್ವಾವಲಂಬಿ ಹಾಗೂ ಸ್ವಾಭಿಮಾನದ ಬದುಕು ಕಟ್ಟಿಕೊಂಡಿದ್ದಾರೆ. ಪುರಸಭೆ ಆಡಳಿತ ಅವರ ಬೇಕು ಬೇಡಿಕೆಗಳಿಗೆ ಮತ್ತು ಅವರ ಹಿತ ಕಾಪಾಡುವ ನಿಟ್ಟಿನಲ್ಲಿ ಕೆಲಸ ಮಾಡಬೇಕಾಗಿದೆ. ಬೀದಿಬದಿ ವ್ಯಾಪಾರಸ್ಥರನ್ನು ಹತ್ತಿಕ್ಕುವ ಮೂಲಕ ನಿರಂತರ ದೌರ್ಜನ್ಯಗಳು ನಡೆಯುತ್ತಲೇ ಇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಕಟ್ಟಡ ಕಾರ್ಮಿಕ ಮುಖಂಡ ಮೆಹಬೂಬ್ ಹವಾಲ್ದಾರ, ರೂಪೇಶ ಮಾಳೋತ್ತರ, ವಿರೇಶ ಮಾಳೋತ್ತರ, ಅಂದಪ್ಪ ಕುರಿ, ಪರಶು ಅರಗಂಜಿ, ವಿರೇಶ ಇಟಗಿ, ಯಮನೂರ ಜಕ್ಕಲಿ, ಹನಮಂತ ಚಿಟಗಿ, ಅನಂದ ರಾಠೋಡ, ರೇಣಪ್ಪ, ಮೈಸೂರ ರಾಠೋಡ, ನೀಲಮ್ಮ ಹಿರೇಮಠ, ಶರಣಮ್ಮ ವಾಲಿ, ಮೈಲಾರಪ್ಪ ಮುತಾರಿ, ಮಾಂಡ್ರೆ ಸೇರಿದಂತೆ ಬಿಸಿಯೂಟ ನೌಕರರ ಸಂಘ, ಆಶಾ ನೌಕರರ ಸಂಘ, ಕಟ್ಟಡ ಕಾರ್ಮಿಕರ, ಗ್ರಾಪಂ ನೌಕರರು, ಅಂಗನವಾಡಿ, ವಿದ್ಯಾರ್ಥಿ-ಯುವಜನ ಸಂಘಟನೆ, ದೇವದಾಸಿ ಮಹಿಳಾ ಸಂಘಟನೆ, ಕೆಪಿಆರ್‌ಎಸ್ ಸೇರಿದಂತೆ ಸಾಮೂಹಿಕ ಸಂಘಟನೆ ಮುಖಂಡರು ಪಾಲ್ಗೊಂಡಿದ್ದರು.




ಕಟ್ಟಡ ಕಾರ್ಮಿಕ ಸಂಘದ ಕಾರ್ಯದರ್ಶಿ ಪೀರು ರಾಠೋಡ ಮಾತನಾಡಿ, ನಗರದ ಬೀದಿ ಬದಿ ವ್ಯಾಪಾರಸ್ಥರಿಗೆ ಗುರುತಿನ ಚೀಟಿಗಳನ್ನು ನೀಡುವ ಮೂಲಕ ಅವರ ವ್ಯಾಪಾರದ ಸ್ಥಳವನ್ನು ಖಾತರಿಗೊಳಿಸಿ ಅವರಿಗೆ ಸೂಕ್ತ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಮೂಲಕ ಅವರಿಗೆ ವ್ಯಾಪಾರ ಭದ್ರತೆಯನ್ನು ಖಾತರಿಗೊಳಿಸಬೇಕು.

ಬೀದಿ ಬದಿ ವ್ಯಾಪಾರಸ್ಥ ಕಾಯ್ದೆಯನ್ನು ಪಟ್ಟಣ ಪಂಚಾಯಿತಿ ಪುರಸಭೆ ಸಮಗ್ರವಾಗಿ ಅನುಷ್ಠಾನಗೊಳಿಸಿ ಬೀದಿಬದಿ ವ್ಯಾಪರಸ್ಥರ ಹಿತಕಾಯಬೇಕು. ರಾಜ್ಯದಲ್ಲಿ ದುಡಿತದ ಅವಧಿಯನ್ನು ದಿನಕ್ಕೆ 12 ಗಂಟೆಗೆ ಹೆಚ್ಚಿಸಿರುವ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

### ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಾರ್ಷಿಕ ಸ್ನೇಹಸಮ್ಮೇಳನ

# ಯಶಸ್ಸು ಕಾಣಲು ಬೌದ್ಧಿಕವಾಗಿ ಸದೃಢರಾಗಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಯಶಸ್ಸನ್ನು ಕಾಣಬೇಕೆಂದರೆ ಶಿಕ್ಷಣದ ಜೊತೆಗೆ ಭೌದ್ಧಿಕವಾಗಿ ಸದೃಢರಾಗಬೇಕು. ಅದಕ್ಕೆ ಪಾಲಕರೂ ಸಹ ಪ್ರೋತ್ಸಾಹಿಸಬೇಕಾದ ಅವಶ್ಯಕತೆ ಇದೆ ಎಂದು ಗದಗ ಡಿಡಿಪಿಐ ಆರ್.ಎಸ್. ಬುರುಡಿ ಹೇಳಿದರು.

ನರೇಗಲ್ಲನ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ವಾರ್ಷಿಕ ಸ್ನೇಹಸಮ್ಮೇಳನ ಮತ್ತು ಮಕ್ಕಳ ಸಾಂಸ್ಕೃತಿಕ ಹಬ್ಬವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ವಿದ್ಯಾವಂತ ಯುವಕರು ವೈಟ್ ಕಾಲರ್ ಹುದ್ದೆಗಳ ಕನಸು ಕಾಣುತ್ತಾರೆ. ಅದು ತಪ್ಪಲ್ಲ. ಅದಕ್ಕೆ ಅನುಗುಣವಾಗಿ ಶೈಕ್ಷಣಿಕ ಪ್ರಗತಿ ಸಾಧಿಸುವದು ಅವಶ್ಯಕವಾಗಿದೆ. ಇಲ್ಲಿನ ಗ್ರಾಮೀಣ ಮಟ್ಟದ ರೈತರು ಶ್ರಮಜೀವಿಗಳಾಗಿದ್ದು, ತಮ್ಮ ಕೃಷಿ ಚಟುವಟಿಕೆ ಮಧ್ಯದಲ್ಲಿಯೂ ಸಹ ತಮ್ಮ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮವಹಿಸುತ್ತಿರುವುದು ಸ್ತುತ್ಯವಾಗಿದೆ ಎಂದರು.

ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಶ್ರೀಗಳು ಶ್ರೀ ಜಗದ್ಗುರು ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆ ಹುಟ್ಟುಹಾಕಿ ನರೇಗಲ್ಲ ಸೇರಿದಂತೆ ಸುತ್ತಮುತ್ತಲಿನ ಗ್ರಾಮೀಣ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿರುವುದು ಶ್ಲಾಘನೀಯವಾಗಿದೆ. ಇಲ್ಲಿ ಕಲಿತ ಮಕ್ಕಳು ಉತ್ತಮ ಶಿಕ್ಷಣ ಪಡೆದು ತಮ್ಮ ಆದರ್ಶ ಜೀವನಕ್ಕೆ ಮುಂದಾಗಲಿ ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಒಂದು ದಶಕದಲ್ಲಿ ಈ ಶಾಲೆ ಸಾಧಿಸಿರುವ ಸಾಧನೆಗೆ ನೀವೇ ಕಾರಣ. ಶಾಲೆಯಲ್ಲಿ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗಾಗಿ ಶಿಕ್ಷಕಿಯರ ಮತ್ತು ಸಮಿತಿಯ ಸದಸ್ಯರು ಶ್ರಮಿಸುತ್ತಿದ್ದಾರೆ. ಅದರಂತೆ ನೀವುಗಳೂ ಸಹ ನಿಮ್ಮ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಕೈಜೋಡಿಸಬೇಕೆಂದರು.

ಸಂಸ್ಥೆಯ ಉಪಾಧ್ಯಕ್ಷ ಎಸ್.ಕೆ. ಪಾಟೀಲ, ಕಾರ್ಯದರ್ಶಿ ಈಶ್ವರ ಬೆಟಗೇರಿ, ಸದಸ್ಯ ಆರ್.ಕೆ. ಗಚ್ಚಿನಮಠ, ಮುತ್ತಣ್ಣ ಪಲ್ಲೇದ ಶರಣಪ್ಪ ಜುಟ್ಲದ, ಎಸ್.ಬಿ. ಲಕ್ಕನಗೌಡ್ರ ಹಾಗೂ ರಮೇಶ ಕಳಕೊಣ್ಣವರ ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕಿ ಎನ್.ಎಸ್. ಹಿರೇಮಠ ಸ್ವಾಗತಿಸಿದರು. ಎ.ಎಮ್. ಬೆಟಗೇರಿ ನಿರೂಪಿಸಿದರು. ಜಯಶ್ರೀ ಗಂಗರಗೊಂಡ ವಂದಿಸಿದರು.

ಡಯಟ್‌ನ ನಿವೃತ್ತ ಉಪನ್ಯಾಸಕ ಕೆ.ಪಿ. ಸಾಲಿಮಠ ಮಾತನಾಡಿ, ವಿದ್ಯಾರ್ಥಿಗಳು ಕಲಿಸಿದ ಗುರುಗಳಲ್ಲಿ ಮತ್ತು ಜನ್ಮ ನೀಡಿದ ತಂದೆ-ತಾಯಿಗಳಲ್ಲಿ ಪೂಜ್ಯನೀಯ ಭಾವನೆ ಹೊಂದಿದಲ್ಲಿ ಸರಸ್ವತಿ ದೇವಿ ತಾನಾಗೇ ಒಲಿದು ನಿಮ್ಮ ಬಳಿ ಬರುತ್ತಾಳೆ ಎಂದರು.

# ಗದಗ ಜಿಲ್ಲಾ ಬ್ಯಾಂಕ್ ನೌಕರರಿಂದ ಮುಷ್ಕರ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಾಂಧಿ ಸರ್ಕಲ್ ಹತ್ತಿರದಲ್ಲಿ ಕೆನರಾ ಬ್ಯಾಂಕ್ ಎದುರು ಗದಗ ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಮ್ರೆಡ್ ಹನುಮೇಶ್ ಎಂ.ಗಂಗರಾಹುತರ, ಅಧ್ಯಕ್ಷರಾದ ಕಾಮ್ರೆಡ್ ವಾಯ್.ಎಸ್. ನಾಯಕ್ ಇವರ ನೇತೃತ್ವದಲ್ಲಿ ಬ್ಯಾಂಕ್ ನೌಕರರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮುಷ್ಕರ ನಡೆಸಿದರು.

ಕಾರ್ಮಿಕ ವಿರೋಧಿ ನೀತಿಯನ್ನು ಹೊಂದಿರುವ 4 ಕಾರ್ಮಿಕ ನೀತಿ ಸಂಹಿತೆಗಳನ್ನು ಕೇಂದ್ರ ಸರ್ಕಾರ ಹಿಂದಕ್ಕೆ ಪಡೆದುಕೊಳ್ಳಬೇಕು, ಎಲ್ಲ ಇಲಾಖೆಗಳಲ್ಲಿ ಎಲ್ಲ ವರ್ಗದ ಹುದ್ದೆಗಳ ಅಗತ್ಯ ನೇಮಕಾತಿಯನ್ನು ಮಾಡಲೇಬೇಕು, ವಿಮಾ ಕಂಪನಿಗಳ ಖಾಸಗೀಕರಣ ಬೇಡ, ಸಾರ್ವತ್ರಿಕ ಬ್ಯಾಂಕುಗಳ ಖಾಸಗೀಕರಣ ಬೇಡ, ಹೊರಗುತ್ತಿಗೆ ನೌಕರರನ್ನು ಕಾಯಂಗೊಳಿಸಬೇಕು ಇವೇ ಮುಂತಾದ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದರು.

ಮುಷ್ಕರದಲ್ಲಿ ಬ್ಯಾಂಕ್ ನೌಕರರ ಪ್ರಧಾನ ಕಾರ್ಯದರ್ಶಿ ಕಾಮ್ರೇಡ ಹನುಮೇಶ್ ಎಂ.ಗಂಗರಾಹುತರ, ಅಧ್ಯಕ್ಷರಾದ ಕಾಮ್ರೆಡ್ ವಾಯ್.ಎಸ್. ನಾಯಕ್, ಗ್ರಾಮೀಣ ಬ್ಯಾಂಕ್ ನೌಕರರ ಸಂಘದ ಮುಖಂಡರಾದ ಕಾಮ್ರೆಡ್ ಪ್ರವೀಣ್ ಅಣ್ಣಿಗೇರಿ, ಕಾಮ್ರೇಡ್ ರಮ್ಯ, ವಿಮಾನ ನೌಕರರ ಸಂಘದ ಮುಖಂಡರಾದ ಕಾಮ್ರೆಡ್ ಜೆ.ಎಸ್. ತಳವಾರ, ಕಾಮ್ರೆಡ್ ವಿ.ಕೆ. ಮುದ್ಗಲ್‌ಮಠ, ಕಾಮ್ರೆಡ್ ಮಂಜುನಾಥ್ ದೊಡ್ಮನಿ, ಕಾಮ್ರೆಡ್ ಸಿದ್ದು ಉಮಚಗಿ, ಕಾಮ್ರೆಡ್ ವಿಜಯ್, ವಿನೋದ್ ಹೊಸೂರ, ಹರೀಶ್ ಬಾಗಲಕೋಟೆ, ದೀಪಕ್ ಕೊಲ್ಲಾಪುರಿ, ರಾಜು ಸಿಂಗಾಡಿ, ಕಾಮ್ರೆಡ್ ಅಶೋಕ್ ಗೌಡರ, ಕಾಮ್ರೆಡ್ ಸಿದ್ದನಗೌಡ, ಕಾಮ್ರೆಡ್ ಕೃಷ್ಣವೇಣಿ, ಕಾಮ್ರೆಡ್ ಸತ್ಯವ್ವ ಮೇಲ್ಮನಿ, ಕಾಮ್ರೆಡ್ ಜೊತ್ಸ್ನಾ ಟಿ, ಕಾಮ್ರೆಡ್ ಮಣಿಕಂಠ, ಕಾಮ್ರೆಡ್ ವಿಕ್ರಂ ಬಲೇರಿ, ಕಾಮ್ರೆಡ್ ಶ್ರೀಕಾಂತ್, ಕಾಮ್ರೆಡ್ ಮಧು, ಕಾಮ್ರೆಡ್ ಸತೀಶ್ ಪಾಲ್ಗೊಂಡಿದ್ದರು ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಾಮ್ರೆಡ್ ಹನುಮೇಶ್ ಎಂ.ಗಂಗರಾಹುತರ ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

# ಸಮಾವೇಶಕ್ಕೆ ತೆರಳಲು ಸಕಲ ಸಿದ್ಧತೆ

▶▶ಮೊದಲನೇ ಪುಟದಿಂದ

ತಾಲೂಕಿನಲ್ಲಿ ಇದೇ ಸಮಾವೇಶದಲ್ಲಿ 2118 ಇ-ಪೌತಿ ಖಾತೆಯನ್ನು ಇತ್ಯರ್ಥಪಡಿಸಿದ್ದು, ಇದಕ್ಕೆ ಸಂಬಂಧಿಸಿದ ಕುಟುಂಬಗಳ ವಾರಸುದಾರರಿಗೂ ಸಹ ಇತ್ಯರ್ಥಪಡಿಸಿದ ದಾಖಲೆಯನ್ನು ನೀಡಲಾಗುತ್ತಿದೆ.

ಶಿರಹಟ್ಟಿಯ ತಹಸೀಲ್ದಾರ ಕಚೇರಿಯ ಎಫ್‌ಡಿಸಿ ವಿವೇಕ ಡಿಸ್ಲೆ ಮತ್ತು ಸಂಬಂಧಿಸಿದ ಗ್ರಾಮಗಳ ಆಡಳಿತ ಅಧಿಕಾರಿ ಮತ್ತು ಕಂದಾಯ ನಿರೀಕ್ಷಕರು ಮನೆ ಮನೆಗೆ ತೆರಳಿ ದಾಖಲೆ ಸಂಗ್ರಹಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಿ ಇದೀಗ ಆ ಕುಟುಂಬಗಳಿಗೆ ದಾಖಲೆ ನೀಡಲಾಗುತ್ತಿದೆ.

ಸಮಾವೇಶಕ್ಕೆ ಹಕ್ಕುಪತ್ರ ಮತ್ತು ಇ-ಪೌತಿ ಖಾತೆಯ ಸಂಬಂಧಿಸಿದ ಅರ್ಹ ಫಲಾನುಭವಿಗಳನ್ನು ಕರೆದೊಯ್ಯಲು ಈಗಾಗಲೇ 35 ಬಸ್ ವ್ಯವಸ್ಥೆಯನ್ನು ಮಾಡಿಕೊಳ್ಳಲಾಗಿದ್ದು, ಇದಕ್ಕಾಗಿ ಪ್ರತಿ ಬಸ್‌ನಲ್ಲಿಯೂ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ/ಸಿಆರ್‌ಪಿ, ಗ್ರಾ.ಪಂ ಕಾರ್ಯದರ್ಶಿ/ಗ್ರಾಮ ಆಡಳಿತ ಅಧಿಕಾರಿ, ಡಾಟಾ ಎಂಟ್ರಿ ಆಪರೇಟರ್ ಮತ್ತು ಆಶಾ ಕಾರ್ಯಕರ್ತೆಯರನ್ನು ನಿಯೋಜಿಸಲಾಗಿದೆ. ಫೆ. 14ರ ಬೆಳಗಿನ ಜಾವ ಸಂಬಂಧಿಸಿದ ಗ್ರಾಮ ಪಂಚಾಯತಿಗಳಲ್ಲಿ ಬೆಳಗಿನ ಉಪಹಾರದ ವ್ಯವಸ್ಥೆಯನ್ನು ಸಹ ಮಾಡಿಕೊಳ್ಳಲಾಗಿದೆ.

# ಜಂತುಹುಳು ನಿವಾರಣಾ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಅಲಗಿಲವಾಡ ಶಾಲೆಯಲ್ಲಿ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನವನ್ನು ಆಚರಿಸಲಾಯಿತು.

ಜಂತುಹುಳು ಭಾದೆಯಿಂದ ಮಕ್ಕಳಲ್ಲಿ ರಕ್ತಹೀನತೆ, ಏಕಾಗ್ರತೆ ಕೊರತೆ, ಬೆಳವಣಿಗೆ ಕುಂಠಿತಗೊಳ್ಳುತ್ತಿದ್ದು ಈ ಮಾತ್ರೆ ನೀಡುವದರ ಮೂಲಕ ಇವೆಲ್ಲವನ್ನು ತಡೆಗಟ್ಟಬಹುದಾಗಿದೆ. ಮಾತ್ರೆಯನ್ನು ಮಕ್ಕಳಿಗೆ ಮಧ್ಯಾಹ್ನ ಊಟವಾದ ಅರ್ಧ ಗಂಟೆ ನಂತರ ಈ ಮಾತ್ರೆ ಕೊಡಬೇಕು ಹಾಗೂ ಅನಾರೋಗ್ಯವಿರುವ ಮಕ್ಕಳಿಗೆ ಮಾತ್ರೆ ಕೊಡುವಂತಿಲ್ಲ.

ಮಕ್ಕಳ ಆರೋಗ್ಯದ ದೃಷ್ಟಿಯಿಂದ ಎಲ್ಲಾ ಮಕ್ಕಳು ಮಾತ್ರೆ ಸೇವಿಸಬೇಕು ಎಂದು ಆರೋಗ್ಯ ಇಲಾಖೆ ಸಿಬ್ಬಂದಿಗಳಾದ ಪ್ರತಿಭಾ ಸಿದ್ದರಡ್ಡಿ, ಮಾಂತೇಶ ತಿಮ್ಮಾಪೂರ, ಪ್ರಧಾನ ಗುರುಗಳಾದ ಹಾಲೇಶ ಎಸ್.ಜಕ್ಕಲಿ, ಶಿಕ್ಷಕರಾದ ನೇಮೇಶ ಯರಗುಪ್ಪಿ ಮಕ್ಕಳಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಅಂಗನವಾಡಿ ಗುರುಮಾತೆಯರಾದ ಮಹಾದೇವಿ ಹಸವಿಮಠ, ಗ್ರಾಮದ ಗುರು-ಹಿರಿಯರು, ಮಕ್ಕಳು ಭಾಗವಹಿಸಿದ್ದರು.

### ಸಮುದಾಯ ಸಂಪನ್ಮೂಲ ವ್ಯಕ್ತಿಗಳಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರದಲ್ಲಿ ಸಿ.ಆರ್. ಮುಂಡರಗಿ ಕರೆ

# ಸ್ವ-ಸಹಾಯ ಗುಂಪುಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಈ ಹಿಂದೆ ಮಹಿಳೆಯರು ಸ್ವ-ಸಹಾಯ ಗುಂಪುಗಳನ್ನು ಸೇರಲು ಮತ್ತು ಸಭೆ ಸಮಾರಂಭಗಳಲ್ಲಿ ಭಾಗವಹಿಸಲು ಹಿಂದೇಟು ಹಾಕುವ ಕಾಲವಿತ್ತು. ಆದರೆ ಈಗ ಕಾಲ ಬದಲಾಗಿದ್ದು, ಸ್ವ-ಸಹಾಯ ಗುಂಪುಗಳಲ್ಲಿ ಸಕ್ರಿಯವಾಗಿ ಮಹಿಳೆಯರು ಪಾಲ್ಗೊಂಡು ವಿವಿಧ ಸಾಲ ಸೌಲಭ್ಯಗಳನ್ನು ಪಡೆದುಕೊಳ್ಳುವ ಮೂಲಕ ಕುಟುಂಬದ ಆದಾಯ ವೃದ್ಧಿಗೆ ತನ್ನದೇ ಆದ ಕೊಡುಗೆ ನೀಡುತ್ತಿದ್ದಾಳೆ. ಇಂದಿನ ತರಬೇತಿಯಲ್ಲಿ ನೀಡುವ ಮಾಹಿತಿ ಪಡೆದುಕೊಂಡು ಗ್ರಾಮೀಣ ಮಹಿಳೆಯರನ್ನು ಮುಖ್ಯವಾಹಿನಿಗೆ ತರಲು ಶ್ರಮಿಸಬೇಕು ಎಂದು ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಕರೆ ನೀಡಿದರು.

ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯಡಿ ಬರುವ ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ ಹಾಗೂ ಜಿಲ್ಲಾಡಳಿತ ಮತ್ತು ಜಿ.ಪಂ, ಗದಗ ಇವರ ಸಹಭಾಗಿತ್ವದಲ್ಲಿ ಲಖಪತಿ ದೀದಿಗಳ ಕುರಿತು ಕೃಷಿ ಸಖಿ, ಪಶು ಸಖಿ ಹಾಗೂ ವಿವಿಧ ಸಮುದಾಯ ಸಂಪನ್ಮೂಲ ವ್ಯಕ್ತಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಮುಖ್ಯ ಅತಿಥಿಗಳಾಗಿ ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ಮಾತನಾಡಿ, ಗ್ರಾಮೀಣ ಸಮುದಾಯಗಳ ಅಭಿವೃದ್ಧಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ತಂದಿರುವ ಹಲವಾರು ಕಾರ್ಯಕ್ರಮಗಳಲ್ಲಿ ಎನ್.ಆರ್.ಎಲ್.ಎಮ್ ಯೋಜನೆಯು ಪ್ರಮುಖವಾಗಿದ್ದು, ಯೋಜನೆಯಲ್ಲಿರುವ ಸೌಲಭ್ಯಗಳನ್ನು ಪಡೆದುಕೊಂಡು ಬಡತನದಿಂದ ಹೊರಬರಲು ಸಂಘಟಿತ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ತರಬೇತಿ ಕಾರ್ಯಕ್ರಮದಲ್ಲಿ ಜಿ.ಪಂ ಸಹಾಯಕ ಕಾರ್ಯದರ್ಶಿ ಎಸ್.ಎಸ್. ಕಲ್ಮನಿ, ಗ್ರಾ.ಪಂ ಮಟ್ಟದ ಒಕ್ಕೂಟಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಸಮುದಾಯ ಸಂಪನ್ಮೂಲ ವ್ಯಕ್ತಿಗಳು, ಸಂಜೀವಿನಿ ಯೋಜನೆಯ ಜಿಲ್ಲಾ ಹಾಗೂ ತಾಲೂಕು ಅಭಿಯಾನ ನಿರ್ವಹಣಾ ಘಟಕದ ಸಿಬ್ಬಂದಿಗಳು ಭಾಗವಹಿಸಿದ್ದರು.

ಕಾರ್ಯಾಗಾರದಲ್ಲಿ ಸ್ವ-ಸಹಾಯ ಸಂಘದ ಮಹಿಳೆಯರಿಗೆ ವಿವಿಧ ಜೀವನೋಪಾಯ ಚಟುವಟಿಕೆಗಳನ್ನು ಕಲ್ಪಿಸುವ ಮೂಲಕ ಆದಾಯವನ್ನು ಹೆಚ್ಚಿಸಿ, ಅವರು ಲಖಪತಿ ದೀದಿಗಳಾಗಿ ಹೇಗೆ ಅಭಿವೃದ್ಧಿ ಹೊಂದಬಹುದು ಎನ್ನುವುದರ ತರಬೇತಿ ನೀಡಲಾಯಿತು. ಗ್ರಾಮೀಣ ಪ್ರದೇಶದ ಸ್ವ-ಸಹಾಯ ಗುಂಪಿನ ಮಹಿಳೆಯರು ಕೃಷಿ ಹಾಗೂ ಕೃಷಿಯೇತರ ಜಿವನೋಪಾಯ ಕ್ಷೇತ್ರಗಳಲ್ಲಿ ಇರುವ ಅವಕಾಶಗಳು ಹಾಗೂ ಈ ಅವಕಾಶಗಳಿಗೆ ಪೂರಕವಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿಗೆ ತಂದಿರುವ ಸೌಲಭ್ಯಗಳನ್ನು ಪಡೆದುಕೊಳ್ಳುವ ಕುರಿತಂತೆ ಸಹ ತರಬೇತಿಯಲ್ಲಿ ತಿಳಿಸಿಕೊಡಲಾಯಿತು.

ಸಂಪನ್ಮೂಲ ವ್ಯಕ್ತಿಗಳಾಗಿ ಗಿರೀಶ ಕಬಾಡರ್, ಮಧುಮತಿ ಪಾಟೀಲ್, ಮಡ್ಡೆಪ್ಪ ಮಲ್ಲಿಮಾರ್ ತರಬೇತಿ ನೀಡಿದರು. ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರಾದ ರಘುನಾಥಗೌಡ ಪಾಟೀಲ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ವ್ಯವಸ್ಥಾಪಕರಾದ ಬಸವರಾಜ ಮೂಲಿಮನಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿ.ಪಂ ಯೋಜನಾ ನಿರ್ದೇಶಕ ಎಮ್.ವಿ. ಚಳಗೇರಿ ಮಾತನಾಡಿ, ಗ್ರಾಮೀಣ ಪ್ರದೇಶದ ಸ್ವ-ಸಹಾಯ ಸಂಘದ ಮಹಿಳೆಯರ ಆದಾಯವನ್ನು ಹೆಚ್ಚಿಸಿ ಅವರನ್ನು ಲಕ್ಷಾಧಿಪತಿಗಳನ್ನಾಗಿ (ಲಖಪತಿ) ಅಭಿವೃದ್ಧಿಪಡಿಸಲು ಇರುವ ಅವಕಾಶಗಳ ಕುರಿತು ಇಂದಿನ ತರಬೇತಿಯಲ್ಲಿ ಸಂಪನ್ಮೂಲ ವ್ಯಕ್ತಿಗಳು ಮಾಹಿತಿ ನೀಡುತ್ತಾರೆ. ತರಬೇತಿಯಲ್ಲಿಯ ವಿಷಯಗಳನ್ನು ಸರಿಯಾಗಿ ತಿಳಿದುಕೊಂಡು ಸ್ವ-ಸಹಾಯ ಗುಂಪಿನ ಮಹಿಳೆಯರ ಅಭಿವೃದ್ಧಿಗೆ ಸೇವೆಗಳನ್ನು ಒದಗಿಸಬೇಕು ಎಂದು ತಿಳಿಸಿದರು.

# ಹಣಕಾಸು ಸಾಕ್ಷರತಾ ಪಾಕ್ಷಿಕ




**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ರಿಸರ್ವ್ ಬ್ಯಾಂಕ್ ವತಿಯಿಂದ ದೇಶವ್ಯಾಪಿ ಫೆಬ್ರವರಿ 9ರಿಂದ ಫೆಬ್ರವರಿ 13ರವರೆಗೆ ಹಣಕಾಸು ಸಾಕ್ಷರತಾ ವಾರ (FLW) ಕಾರ್ಯಕ್ರಮವನ್ನು ಆಚರಿಸಲಾಗುತ್ತಿದೆ. ಗದುಗಿನಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಜಿಲ್ಲಾಧಿಕಾರಿ ಕಚೇರಿಯಲ್ಲಿ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಲೀಡ್ ಬ್ಯಾಂಕ್ ಡಿಸ್ಟ್ರಿಕ್ಟ್ ವ್ಯವಸ್ಥಾಪಕ ಸಂತೋಷ್ ಎಂ.ವಿ ಹಾಗೂ ವಿವಿಧ ಬ್ಯಾಂಕುಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಜಾಗೃತಿ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಲಾಯಿತು.

ಹಣಕಾಸು ಸಾಕ್ಷರತಾ ವಾರದ ಅವಧಿಯಲ್ಲಿ ಭಾಗವಹಿಸುವವರಿಗೆ KYC, CKYC, ಮನಿ ಮ್ಯೂಲ್ ಖಾತೆಗಳು, ಸೈಬರ್ ಮೋಸಗಳು ಹಾಗೂ ಸುರಕ್ಷಿತ ಬ್ಯಾಂಕಿಂಗ್ ಕ್ರಮಗಳ ಕುರಿತು ಮಾರ್ಗದರ್ಶನ ನೀಡಲಾಗುತ್ತದೆ.

**ಕೋಟೆ ಗ್ರಾಮ ಯಳವತ್ತಿಯಲ್ಲಿ ಲಕ್ಷ್ಮೇಶ್ವರ ತಾಲೂಕಾ 2ನೇ ಕನ್ನಡ ಸಾಹಿತ್ಯ ಸಮ್ಮೇಳನ**

# ಫೆ. 14ರಂದು ಕನ್ನಡ ಸಾಹಿತ್ಯ ಸಮ್ಮೇಳನ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಕೋಟೆನಾಡು ಯಳವತ್ತಿ ಗ್ರಾಮದಲ್ಲಿ ಕಸಾಪ ರಾಜ್ಯ, ಜಿಲ್ಲಾ, ತಾಲೂಕು ಮತ್ತು ಯಳವತ್ತಿ ಗ್ರಾಮದ ಸಮಸ್ತ ಮಹಾಜನತೆಯ ಸಹಯೋಗದಲ್ಲಿ ಫೆ. 14ರಂದು ಲಕ್ಷ್ಮೇಶ್ವರ ತಾಲೂಕಿನ ದ್ವಿತೀಯ ಕನ್ನಡ ಸಾಹಿತ್ಯ ಸಮ್ಮೇಳನ ಗ್ರಾಮದ ಕೋಟೆ ಆವರಣದಲ್ಲಿ ಜರುಗಲಿದ್ದು, ಶನಿವಾರ ಬೆಳಿಗ್ಗೆ 7.15ಕ್ಕೆ ಮಹಾ ಕವಿ ಪಂಪ ವೇದಿಕೆಯಲ್ಲಿ ದ್ವಿತೀಯ ಕನ್ನಡ ಸಾಹಿತ್ಯ ಸಮ್ಮೇಳನ ಅಧಿಕೃತವಾಗಿ ಚಾಲನೆಗೊಳ್ಳಲಿದೆ.

ಶಾಸಕ ಡಾ. ಚಂದ್ರು ಲಮಾಣಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಲಿದ್ದು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಪರಿಷತ್ತಿನ ಧ್ವಜಾರೋಹಣ ಹಾಗೂ ಕನ್ನಡ ಧ್ವಜವನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಈಶ್ವರ ಮೆಡ್ಲೇರಿ ನೆರವೇರಿಸಲಿದ್ದಾರೆ. ಈ ವೇಳೆ ಪಿಎಸ್‌ಐಗಳಾದ ನಾಗರಾಜ ಗಡದ, ಈರಣ್ಣ ರಿತ್ತಿ, ಕುಮಾರಸ್ವಾಮಿ ಬಳ್ಳಾರಿ, ಆರ್.ಎಚ್. ನರೇಗಲ್ ಉಪಸ್ಥಿತರಿರುವರು.

ಬೆಳಿಗ್ಗೆ 8.30ಕ್ಕೆ ಕನ್ನಡ ಭುವನೇಶ್ವರಿ ಭಾವಚಿತ್ರ ಮತ್ತು ಸಮ್ಮೇಳನ ಸರ್ವಾಧ್ಯಕ್ಷರ ಭವ್ಯ




ಮೆರವಣಿಗೆಯು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಪ್ರಾರಂಭವಾಗಿ ಪ್ರಮುಖ ಬೀದಿಗಳಲ್ಲಿ ಸಾಗಿ ಮುಖ್ಯ ವೇದಿಯವರೆಗೆ ನಡೆಯಲಿದೆ. ಮೆರವಣಿಗೆಗೆ ಯಳವತ್ತಿಯ ಶ್ರೀ ಮೃತ್ಯುಂಜಯ ಹಿರೇಮಠ ಚಾಲನೆ ನೀಡಲಿದ್ದಾರೆ. ಯಳವತ್ತಿ ಗ್ರಾಮದ ಸಮಸ್ತ ಹಿರಿಯರು, ಕಸಾಪ ಸದಸ್ಯರು ಹಾಜರಿರಲಿದ್ದಾರೆ.

ಲೇಖಕರ ಕೃತಿಗಳನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ ಬಿಡುಗಡೆಗೊಳಿಸುವರು. ಮಳಿಗೆಗಳ ಉದ್ಘಾಟನೆಯನ್ನು ವಿಧಾನಪರಿಷತ್ ಸದಸ್ಯ ಸಲೀಂ ಅಹ್ಮದ್, ಚಿತ್ರಕಲಾ ಪ್ರದರ್ಶನವನ್ನು ಶಾಸಕ ಜಿ.ಎಸ್. ಪಾಟೀಲ, ಸಮ್ಮೇಳಾನಾಧ್ಯಕ್ಷರ ಭಾಷಣ ಪ್ರತಿ ಬಿಡುಗಡೆಯನ್ನು ವಿ.ಪ. ಸದಸ್ಯ ಪ್ರೊ. ಎಸ್.ವಿ. ಸಂಕನೂರ, ಮಹಿಳಾ ಕಲಾ ಪ್ರದರ್ಶನವನ್ನು ವಿ.ಪ ಸದಸ್ಯ ಪ್ರದೀಪ ಶೆಟ್ಟರ ನೆರವೇರಿಸಲಿದ್ದಾರೆ. ಮಾಜಿ ಶಾಸಕರುಗಳಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಟಿ.ಈಶ್ವರ, ನಾಗರಾಜ ಮಡಿವಾಳರ, ಗೀತಾ ಬೀರಣ್ಣವರ, ಎಸ್.ಪಿ. ಬಳಿಗಾರ, ಎಂ.ಎಸ್. ದೊಡ್ಡಗೌಡ್ರ ಉಪಸ್ಥಿತರಿರುವರು. ಅತಿಥಿಗಳಾಗಿ ಜನಪ್ರತಿನಿಧಿಗಳು, ಕಸಾಪ ಜಿಲ್ಲಾ, ತಾಲೂಕು ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಗಣ್ಯರು ಮತ್ತಿತ್ತರು ಆಗಮಿಸಲಿದ್ದಾರೆ.

ನಂತರ ನಡೆಯುವ ಪ್ರಥಮ ಗೋಷ್ಠಿಯಲ್ಲಿ ಐತಿಹಾಸಿಕ ಯಳವತ್ತಿ ಗ್ರಾಮ ಹಾಗೂ ಲಕ್ಷ್ಮೇಶ್ವರ ತಾಲೂಕು ದರ್ಶನ ಕಾರ್ಯಕ್ರಮ, ಮದ್ಯಾಹ್ನ 2 ಗಂಟೆಯಿಂದ 2ನೇ ಗೋಷ್ಠಿಯಲ್ಲಿ ಕೃಷಿ, ಮಹಿಳಾ ಹಾಗೂ ಮಕ್ಕಳ ಸಾಹಿತ್ಯ ಗೋಷ್ಠಿಗಳು ನಡೆಯಲಿದ್ದು, ಪೂರ್ಣಾಜಿ ಖರಾಟೆ ಅಧ್ಯಕ್ಷತೆ ವಹಿಸಲಿದ್ದಾರೆ. ಮಹೇಶ ಹೊಗೆಸೊಪ್ಪಿನ್, ಬಸವರಾಜ ಬಾಳೇಶ್ವರಮಠ, ಬಸವರಾಜ ಬೆಂಡಿಗೇರಿ, ಮಾಲಾದೇವಿ ದಂದರಗಿ, ನಾಗರಾಜ ಹಣಗಿ ವಿಷಯ ಮಂಡನೆ ಮಾಡಲಿದ್ದಾರೆ. ಅನೇಕ ಮುಖಂಡರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಮಧ್ಯಾಹ್ನ 3.30ಕ್ಕೆ ಕವಿಗೋಷ್ಠಿ ನಡೆಯಲಿದ್ದು, ಪ್ರೊ. ಎಸ್.ಬಿ. ಕರಿಭರಮನಗೌಡರ ಅಧ್ಯಕ್ಷತೆ ವಹಿಸಲಿದ್ದಾರೆ.

ಸಿ.ಆರ್. ಗೋಕಾವಿ ಉದ್ಘಾಟನಾ ನುಡಿ ಹಾಗೂ ನಿರ್ಮಲಾ ಶೆಟ್ಟರ ಆಶಯ ನುಡಿ ನುಡಿಯಲಿದ್ದಾರೆ. ಸಂಜೆ 5 ಗಂಟೆಗೆ ಸಮ್ಮೇಳನಾಧ್ಯಕ್ಷರ ಬದುಕು-ಬರಹ ಸಂವಾದ ನಡೆಯಲಿದ್ದು, ಹಿರಿಯ ಸಾಹಿತಿ ಕೊತ್ತಲ ಮಹಾದೇವಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಅಶ್ವಿನಿ ಅಂಕಲಕೋಟಿ ಸಮ್ಮೇಳನಾಧ್ಯಕ್ಷರ ಬದುಕು, ಬರಹ ಪರಿಚಯಿಸಲಿದ್ದಾರೆ. ನಂತರ ಸಂವಾದ ನಡೆಯಲಿದೆ.

ಸಂಜೆ 6 ಗಂಟೆಗೆ ಬಹಿರಂಗ ಅಧಿವೇಶನ ಜರುಗಲಿದೆ. ಸಂಜೆ 6.30ಕ್ಕೆ ಸನ್ಮಾನ ಹಾಗೂ ಸಮಾರೋಪ ಸಮಾರಂಭ ಬನ್ನಿಕೊಪ್ಪದ ಡಾ. ಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು ಮತ್ತು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ನೆರವೇರಲಿದೆ. ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ ಸಮಾರೋಪ ನುಡಿಗಳನ್ನಾಡುವರು. ರಾತ್ರಿ 8.30ರಿಂದ ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳು ಜರಗಲಿವೆ.

ಬೆಳಿಗ್ಗೆ 10ಕ್ಕೆ ಶಿರಹಟ್ಟಿ-ಬಾಲೇಹೊಸೂರು ಸಂಸ್ಥಾನಮಠದ ಜ.ಫಕೀರ ದಿಂಗಾಲೇಶ್ವರ ಜಗದ್ಗುರುಗಳ ಸಾನ್ನಿಧ್ಯ ಹಾಗೂ ಸಭಾಪತಿ ಬಸವರಾಜ ಹೊರಟ್ಟಿ ಅವರ ಉಪಸ್ಥಿತಿಯಲ್ಲಿ ಸಮಾರಂಭದ ಉದ್ಘಾಟನೆಯನ್ನು ಸಚಿವ ಡಾ. ಎಚ್.ಕೆ. ಪಾಟೀಲ ನೇರವೇರಿಸಲಿದ್ದಾರೆ. ಸಮ್ಮೇಳನದ ಸರ್ವಾಧ್ಯಕ್ಷರಾದ ಲಲಿತಾ ಸಿ.ಕೆರಿಮನಿ ಸರ್ವಾಧ್ಯಕ್ಷರ ನುಡಿಗಳನ್ನು ನುಡಿಯಲಿದ್ದು, ಶಾಸಕ ಡಾ. ಚಂದ್ರು ಲಮಾಣಿ ಅಧ್ಯಕ್ಷತೆ ವಹಿಸಲಿದ್ದಾರೆ. ಸಮ್ಮೇಳನದ ಸ್ಮರಣ ಸಂಚಿಕೆಯನ್ನು ಸಂಸದ ಬಸವರಾಜ ಬೊಮ್ಮಾಯಿ ಬಿಡುಗಡೆಗೊಳಿಸಲಿದ್ದಾರೆ.

**ರಾಷ್ಟ್ರೀಯ ಅಪಸ್ಮಾರ ದಿನಾಚರಣೆ ಕಾರ್ಯಕ್ರಮದಲ್ಲಿ ಸಿದ್ದಪ್ಪ ಲಿಂಗದಾಳ**

# ಒಂಟಿತನ ಮೆದುಳಿನ ಆರೋಗ್ಯವನ್ನು ಹದಗೆಡಿಸುತ್ತದೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಅಪಸ್ಮಾರ ಅಥವಾ ಮೂರ್ಚೆ ರೋಗವು ಮೆದುಳಿನ ಅಸ್ವಸ್ಥತೆಗೆ ಸಂಬಂಧಿಸಿದ ಕಾಯಿಲೆಯಾಗಿದ್ದು, ಎರಡು ಅಥವಾ ಹೆಚ್ಚು ಬಾರಿ ಮೂರ್ಛೆ ಹೋದರೆ ಇದನ್ನು ಅಪಸ್ಮಾರ ಅಥವಾ ಫಿಟ್ಸ್ ಎನ್ನುತ್ತೇವೆ. ಅಪಸ್ಮಾರ ಹೊಂದಿರುವ ವ್ಯಕ್ತಿಗಳನ್ನು ಗೌರವ, ಮಾನವೀಯತೆ ಮತ್ತು ಸಮಾನತೆಯೊಂದಿಗೆ ಕಾಣಬೇಕು. ಸಾರ್ವಜನಿಕರು ಅಪಸ್ಮಾರ ರೋಗದ ಲಕ್ಷಣ ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಅರಿವು ಹೊಂದಬೇಕು ಎಂದು ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಎನ್.ಲಿಂಗದಾಳ ಹೇಳಿದರು.

ಅವರು ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಪ್ರಾಥಮಿಕ ಆರೋಗ್ಯ ಕೇಂದ್ರ, ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಗದಗ ಹಾಗೂ ಲಕ್ಕುಂಡಿ ಇವರ ಸಂಯುಕ್ತ ಆಶ್ರಯದಲ್ಲಿ, ಲಕ್ಕುಂಡಿ ಗ್ರಾಮದ ನದಾಫ್ ಗಲ್ಲಿ ಕಲ್ಮೇಶ್ವರ ದೇವಸ್ಥಾನದ ಸಮುದಾಯ ಭವನದಲ್ಲಿ ಏರ್ಪಡಿಸಲಾಗಿದ್ದ ಅಂತಾರಾಷ್ಟ್ರೀಯ ಅಪಸ್ಮಾರ ದಿನಾಚರಣೆಯ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಆರೋಗ್ಯ ನಿರೀಕ್ಷಣಾಧಿಕಾರಿ ಮುತ್ತಪ್ಪ ಹಟ್ಟಿಮನಿ ಪ್ರತಿಜ್ಞಾವಿಧಿ ಬೋಧಿಸಿದರು. ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹುಲಿಗೇಮ್ಮ ಮಾದರ ಸ್ವಾಗತಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ನಿವೇದಿತಾ ಬಡಿಗೇರ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಾಯ್.ಎನ್. ಕಡೇಮನಿ, ಡಾ. ಅಶ್ವಿನಿ ಎಂ.ಕುರಿಯವರ್, ಜಿಲ್ಲಾ ಕ್ಲಿನಿಕಲ್ ಸೈಕಾಲಜಿಸ್ಟ್ ರೇವಣಸಿದ್ದಪ್ಪ, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಶಾಂತಾ ನೂಕಾಪೂರ, ರವಿ ನಂದ್ಯಾಳ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಾಯ್.ಎನ್. ಕಡೇಮನಿ, ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಬಿ. ಗಡಾದ, ಮುತ್ತಪ್ಪ ಹಟ್ಟಿಮನಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹುಲಿಗೆಮ್ಮ ಮಾದರ, ಆಶಾ ಕಾರ್ಯಕರ್ತೆಯರು ಪಾಲ್ಗೊಂಡು ಪ್ರತಿಜ್ಞಾವಿಧಿ ಸ್ವೀಕರಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಬಿ. ಗಡಾದ ವಂದಿಸಿದರು.

ಅಪಸ್ಮಾರ ವಿಭಾಗದ ಜಿಲ್ಲಾ ಸಂಯೋಜಕ ಪ್ರವೀಣ್ ರೋಣದ ಮಾತನಾಡಿ, ಅಪಸ್ಮಾರ ಹೊಂದಿರುವ ವ್ಯಾಕ್ತಿಗಳನ್ನು ಮತ್ತು ಸಾಮಾಜಿಕವಾಗಿರುವ ಕಳಕಂವನ್ನು ನಿವಾರಿಸಲು ಸಮಾನತೆಯಿಂದ ಕಾಣಬೇಕು ಮತ್ತು ಅವರ ಪರವಾಗಿ ನಿಲ್ಲಬೇಕು.

ಪ್ರತಿಯೊಂದು ಮನೆಯಲ್ಲಿ ಅಪಸ್ಮಾರದ ಬಗ್ಗೆ ಅರಿವನ್ನು ಮೂಡಿಸಬೇಕು. ಅಪಸ್ಮಾರ (ಮೂರ್ಛೆರೋಗ) ಎಂಬುದು ಮೆದುಳಿನ ನರಕೋಶಗಳ ಅಸಹಜ ಚಟುವಟಿಕೆಯಿಂದ ಉಂಟಾಗುವ ದೀರ್ಘಕಾಲದ ನರವೈಜ್ಞಾನಿಕ ಕಾಯಿಲೆಯಾಗಿದೆ. ಇದರಿಂದ ದೇಹದ ಚಲನೆ, ನಡವಳಿಕೆ ಮತ್ತು ಪ್ರಜ್ಞೆಯಲ್ಲಿ ತಾತ್ಕಾಲಿಕ ಅಡಚಣೆಯಾಗುತ್ತದೆ ಎಂದು ವಿವರಿಸಿದರು.

# ನೂತನ ಕೆರೆ ಅಭಿವೃದ್ಧಿ ಸಮಿತಿ ರಚನೆ

**■ವಿಜಯಸಾಕ್ಷಿ ಸುದ್ದಿ, ಗದಗ**



ಸಮೀಪದ ತಿಮ್ಮಾಪೂರ ಗ್ರಾಮದ ಶ್ರೀ ಕರಿಯಮ್ಮ ದೇವಿ ಸಮುದಾಯ ಭವನದಲ್ಲಿ ನಡೆದ ಸಭೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ 'ನಮ್ಮೂರು-ನಮ್ಮ ಕೆರೆ' ಅಭಿವೃದ್ಧಿ ಯೋಜನೆಯ ಪದಾಧಿಕಾರಿಗಳ ಸಮಿತಿಯ ಆಯ್ಕೆ ನಡೆಯಿತು.

ಸಭೆಯನ್ನು ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ ಉದ್ಘಾಟಿಸಿ ಮಾತನಾಡಿ, ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಡಿ ಕೆರೆಗಳ ಸಂರಕ್ಷಣೆ ಮತ್ತು ನೀರಿನ ಸದ್ಬಳಕೆ, ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಪೂಜ್ಯರು ಅನೇಕ ಯೋಜನೆಗಳನ್ನು ಹಮ್ಮಿಕೊಂಡಿದ್ದಾರೆ ಎಂದು ಹೇಳಿದರು.

ಸಮಿತಿ ಅಧ್ಯಕ್ಷರಾಗಿ ರಾಮನಗೌಡ ದೇಸಾಯಿ, ಉಪಾಧ್ಯಕ್ಷರಾಗಿ ಮಹಾದೇವಪ್ಪ ಇದ್ಲಿ, ಕಾರ್ಯದರ್ಶಿಯಾಗಿ ಯಲ್ಲಪ್ಪ ಎಚ್.ಬಾಬರಿ, ಕೋಶಾಧಿಕಾರಿಯಾಗಿ ಮಲ್ಲಪ್ಪ ಅಂಗಡಿ, ಸದಸ್ಯರಾಗಿ ಬಸವರಾಜ ಗಾಜಿ, ಶಿವಪುತ್ರಪ್ಪ ತಿಮ್ಮಾಪೂರ, ಬಸಪ್ಪ ಜೋಗಿನ, ಪ್ರಕಾಶ ಯತ್ನಟ್ಟಿ, ಶೇಖಪ್ಪ ಜೋಗಿನ, ಮಲ್ಲಪ್ಪ ಯತ್ನಟ್ಟಿ, ಮಲ್ಲಪ್ಪ ಡಂಬಳ, ಬಸವರಾಜ ದೇವರವರ, ಆನಂದ ಕಮ್ಮಾರ, ಶರಣಪ್ಪ ಜೋಗಿನ, ಯಲ್ಲಪ್ಪ ಹಾಗಲದ, ನಾಗರಾಜ ಮುಸಿಗೇರಿ, ಶಿವಕುಮಾರ ಜೋಗಿನ, ಬಾಳಪ್ಪ ಗಂಗರಾತ್ರಿ, ಬಸವರಾಜ ಯಲಬುರ್ಗಿ, ಅಲ್ಲಿಸಾಬ ನದಾಫ್, ಬಸವರಾಜ ಇದ್ಲಿ, ಅನಸವ್ವ ಗೂಡ್ಲಾನೂರ, ಶಾಂತವ್ವ ಹಂಚಿನಾಳ, ಸೀತಾ ಜೋಗಿನ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಯೋಜನಾಧಿಕಾರಿಗಳಾದ ವಿಶಾಲ ಅವರು ಮಾತನಾಡಿ, ಧರ್ಮಸ್ಥಳ ಧರ್ಮಾಧಿಕಾರಿಗಳಾದ ಡಾ. ವೀರೇಂದ್ರ ಹೆಗ್ಗಡೆ ಗ್ರಾಮೀಣ ಭಾಗದ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಉದ್ದೇಶದೊಂದಿಗೆ ಕುಡಿಯುವ ನೀರಿನ ಕೆರೆಗಳನ್ನು ಗುರುತಿಸಿ ಅವುಗಳನ್ನು ಪುನರುತ್ಥಾನದ ಮೂಲಕ ಅಭಿವೃದ್ಧಿಪಡಿಸುವ ಯೋಜನೆಯನ್ನು ಹಾಕಿಕೊಂಡಿದಾರೆ ಎಂದು ಹೇಳಿದರು.

ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಮಾತನಾಡಿ, ಗ್ರಾಮದ ಅಭಿವೃದ್ಧಿಗೆ ಸದಾ ಸಹಕಾರ ನೀಡುತ್ತೇವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕೃಷಿ ಮೇಲ್ವಿಚಾರಕ ಈರಣ್ಣ, ವಿಚಾರಕ ದಾದ ಕಲಂದರ, ಉದಯ ಗಂಗರಾತ್ರಿ, ಹೇಮಾ ಮೂಲಿಮನಿ ಹಾಗೂ ಸ್ವ-ಸಹಾಯ ಸಂಘದ ಮಹಿಳೆಯರು, ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಬೀದಿ ನಾಯಿ ನಿಯಂತ್ರಣಕ್ಕೆ ಕ್ರಮ ವಹಿಸಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೀದಿ ನಾಯಿಗಳ ಹಾವಳಿ ತಡೆಗಟ್ಟುವ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಜನರಲ್ಲಿ ಭಯ, ಆತಂಕ ದೂರ ಮಾಡಿ, ಮಾನವೀಯ ರೀತಿಯಲ್ಲಿ ಬೀದಿ ನಾಯಿಗಳ ಹಾವಳಿಯನ್ನು ನಿಯಂತ್ರಿಸುವುದು ನಮ್ಮ ಉದ್ದೇಶವಾಗಿದೆ. ಬೀದಿನಾಯಿಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಮನ್ವಯದೊಂದಿಗೆ ಬೀದಿನಾಯಿ ಜನನ ನಿಯಂತ್ರಣ (ಎಬಿಸಿ Animal Birth Control) ಕಾರ್ಯಕ್ರಮವನ್ನು ಸಂಬಂಧಿತ ಅಧಿಕಾರಿಗಳು ಕೈಗೊಳ್ಳಬೇಕು. ಜಿಲ್ಲೆಯಾದ್ಯಂತ ಸರಿಯಾಗಿ ಕಸದ ನಿರ್ವಹಣೆ ಆಗಬೇಕು. ಜಿಲ್ಲೆಯ ಮಾರುಕಟ್ಟೆ, ಹೋಟೆಲ್, ಮಾಂಸದಂಗಡಿಗಳು, ಸಾರ್ವಜನಿಕ ಸ್ಥಳಗಳಲ್ಲಿ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಬೀಸಾಡದೇ ಮುಚ್ಚಿದ ಡಬ್ಬಿಗಳಲ್ಲಿ ಸಂಗ್ರಹಿಸಬೇಕು. ಈ ನಿಯಮ ಉಲ್ಲಂಘಿಸುವ ವಾಣಿಜ್ಯ ಸಂಸ್ಥೆಗಳ ವಿರುದ್ಧ ದಂಡ ವಿಧಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಬೀದಿ ನಾಯಿಗಳಿಂದ ಉಂಟಾಗುತ್ತಿರುವ ಸಮಸ್ಯೆಗಳು ಹಾಗೂ ಅವುಗಳ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಕ್ರಮಗಳು ಹಾಗೂ ಬೀದಿ ನಾಯಿಗಳ ಆಶ್ರಯ ಕೇಂದ್ರಗಳನ್ನು ತೆರೆಯುವ ಕುರಿತು ಹಾಗೂ ಅವುಗಳ ಪೋಷಣೆ ಕುರಿತು ವಿಸ್ತೃತ ಚರ್ಚೆ ನಡೆಯಿತು.

ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ನೀಲಗುಂದ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

**2026ನೇ ಸಾಲಿನ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಪದಾಧಿಕಾರಿಗಳ ನೇಮಕ**

# ಜಾತ್ರಾ ಮಹೋತ್ಸವವನ್ನು ವೈಶಿಷ್ಟ್ಯಪೂರ್ಣವಾಗಿ ಆಚರಿಸೋಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ತೋಂಟದ ಸಿದ್ಧಲಿಂಗೇಶ್ವರ ಕಲ್ಯಾಣ ಕೇಂದ್ರದಲ್ಲಿ ಶ್ರೀ ಜಗದ್ಗುರು ತೋಂಟದಾರ್ಯ ಮಠದ 2025ನೇ ಸಾಲಿನ ಜಾತ್ರಾ ಮಹೋತ್ಸವದ ಮಹಾಪ್ರಸಾದ ವಿತರಣೆ ಮತ್ತು 2026ನೇ ಸಾಲಿನ ಜಾತ್ರಾಮಹೋತ್ಸವದ ಪೂರ್ವಭಾವಿ ಸಭೆ ಜರುಗಿತು.



2026ನೇ ಸಾಲಿನ ಜಾತ್ರಾ ಸಮಿತಿಯ ಪದಾಧಿಕಾರಿಗಳ ಆಯ್ಕೆ ನಡೆಯಿತು. ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಎಂ.ಸಿ. ಐಲಿ, ಬಾಲಚಂದ್ರ ಭರಮಗೌಡರ, ಎಸ್.ಎಸ್. ಪಟ್ಟಣಶೆಟ್ಟಿ, ಗಂಗಾಧರ ಹಿರೇಮಠ, ಶೇಖಣ್ಣ ಕವಳಿಕಾಯಿ, ವಿರೂಪಣ್ಣ ಬಳ್ಳೊಳ್ಳಿ, ಕೆ.ಎಚ್. ಬೇಲೂರು, ಕೆ.ಎಸ್. ಚೆಟ್ಟಿ, ಎಮ್.ಎಸ್. ಅಂಗಡಿ ಮುಂತಾದವರನ್ನೊಳಗೊಂಡ ಹಿರಿಯ ಭಕ್ತರ ಸಮಿತಿಯು ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷರಾಗಿ ಆಯ್ಕೆಯಾದ ವಿನಾಯಕ ಮಾನ್ವಿ ಮಾತನಾಡಿ, ಜಾತ್ರೆಯನ್ನು ಎಲ್ಲ ಭಕ್ತರ ಸಹಕಾರದೊಂದಿಗೆ ಯಶಸ್ವಿಗೊಳಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಡಾ. ತೋಂಟ-ದ ಸಿದ್ಧರಾಮ ಶ್ರೀಗಳು ಆಶೀರ್ವಚನ ನೀಡಿ, 2025ನೇ ಸಾಲಿನ ಜಾತ್ರಾ ಮಹೋತ್ಸವದ ಸರ್ವ ಪದಾಧಿಕಾರಿಗಳು ಅತ್ಯಂತ ಕ್ರಿಯಾಶೀಲರಾಗಿ ಎಲ್ಲಾ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿದ್ದಾರೆ. ಅಂತೆಯೇ 2026ನೇ ಸಾಲಿನ ಜಾತ್ರಾ ಮಹೋತ್ಸವವನ್ನು ಸರ್ವ ಸದ್ಭಕ್ತರ ಹಾಗೂ ಪದಾಧಿಕಾರಿಗಳ ಸಹಕಾರದಿಂದ ವೈಶಿಷ್ಟ್ಯಪೂರ್ಣವಾಗಿ ಆಚರಿಸಬೇಕು. ಜಾತ್ರೆಗಳು ಕೇವಲ ಸಾಂಪ್ರದಾಯಿಕ ಹಿನ್ನೆಲೆಯನ್ನು ಹೊಂದಿರದೆ, ಜನಸಾಮಾನ್ಯರ ಜ್ಞಾನದೀವಿಗೆಯನ್ನು ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಪುಸ್ತಕಗಳ ಬಿಡುಗಡೆ, ಕೃಷಿ ಚಟುವಟಿಕೆ, ನಾಡಿನ ಸಾಹಿತಿಗಳಿಂದ ಭಾಷಣ ಹೀಗೆ ಅನೇಕ ಮೌಲಿಕ ಕಾರ್ಯಕ್ರಮಗಳನ್ನು ಅಳವಡಿಸಿಕೊಳ್ಳಬೇಕು. ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀಗಳು ಹಾಕಿದ ಬಸವಪಥದಲ್ಲಿಯೇ ಈ ಜಾತ್ರೆಯು ಸಾಗಲಿದ್ದು, ಸಕಲ ಸದ್ಭಕ್ತರು ಜಾತ್ರಾ ಪದಾಧಿಕಾರಿಗಳೊಂದಿಗೆ ಜಾತ್ರೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಕರೆ ನೀಡಿದರು.

ಕಳೆದ 2025ನೇ ಸಾಲಿನ ಜಾತ್ರಾ ಸಮಿತಿಯ ಅಧ್ಯಕ್ಷರಾದ ಡಾ. ಧನೇಶ ದೇಸಾಯಿ ಸರ್ವರನ್ನೂ ಸ್ವಾಗತಿಸಿದರು. ಎಂ.ಸಿ. ಐಲಿ ನಿರೂಪಿಸಿದರು. ಪ್ರಕಾಶ ಅಸುಂಡಿ, ಜೆ.ಕೆ. ಜಮಾದಾರ ಪ್ರಾಸ್ತಾವಿಕವಾಗಿ ಜಾತ್ರೆ ನಡೆದು ಬಂದ ಇತಿಹಾಸವನ್ನು ಸಭೆಗೆ ವಿವರಿಸಿದರು.

ಆ ಪ್ರಕಾರ ಈ ವರ್ಷದ ಜಾತ್ರಾ ಸಮಿತಿಯ ಅಧ್ಯಕ್ಷರನ್ನಾಗಿ ವಿನಾಯಕ ಮಾನ್ವಿ, ಉಪಾಧ್ಯಕ್ಷರನ್ನಾಗಿ ಶಿವಯ್ಯ ನಾಲ್ವತ್‌ವಾಡಮಠ, ಸುಭಾಷ ಚನ್ನಪ್ಪನವರ, ಸುಧಾ ಹುಚ್ಚಣ್ಣವರ, ಕೋಶಾಧ್ಯಕ್ಷರಾಗಿ ವಿರೂಪಾಕ್ಷಪ್ಪ ದಲಾಲಿ, ಸಹ ಕೋಶಾಧ್ಯಕ್ಷರಾಗಿ ಈರಣ್ಣ ಗಡಗಿ, ಕಾರ್ಯದರ್ಶಿಗಳಾಗಿ ಚೇತನ ಅಂಗಡಿ, ಸಹ ಕಾರ್ಯದರ್ಶಿಗಳಾಗಿ ಎಮ್.ಎಚ್. ಹೂಗಾರ, ಚಂದ್ರಶೇಖರ ಜಿ.ರಾಜೂರ, ಎಸ್.ಎಂ. ಪವಾಡಿಗೌಡ್ರ, ಸಂಘಟನಾ ಕಾರ್ಯದರ್ಶಿಯಾಗಿ ಉಮೇಶಗೌಡ ಪಾಟೀಲ, ಯಲ್ಲೂಸಾ ಮೋತಿಲಾಲಸಾ ಹಬೀಬ ಆಯ್ಕೆಯಾಗಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka